ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೬೪

**ಪಟ್ಟಿ – ೨೪**

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತಮೂರನೆಯ ಅಧಿವೇಶನ**
**(ಮುಂದುವರೆದ ಉಪವೇಶನ)**

**ಬುಧವಾರ, ದಿನಾಂಕ : ೩೧ನೇ ಮಾರ್ಚ್, ೨೦೨೧**

---

## ಸಮೂಹ – III

೧. ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು.

೨. ಕಂದಾಯ ಸಚಿವರು.

೩. ವಸತಿ ಸಚಿವರು.

೪. ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

೫. ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು.

೬. ಸಮಾಜ ಕಲ್ಯಾಣ ಸಚಿವರು.

೭. ಪಶುಸಂಗೋಪನೆ ಸಚಿವರು.

---

## ಉದ್ಯೋಗ ವಿನಿಮಯ ಕೇಂದ್ರವನ್ನು ಪುನರ್ ಸ್ಥಾಪಿಸುವ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೯ (೨೪೮೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಈ ಹಿಂದೆ ಪರಿಶಿಷ್ಟ ಜಾತಿ/ಪಂಗಡದವರಿಗಾಗಿ ಸಮಾಜ ಕಲ್ಯಾಣ ಇಲಾಖೆಯ ನಿರ್ದೇಶನಾಲಯದಲ್ಲೇ ಇದ್ದ ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೋಂದಾಯಿಸಿದ್ದವರ ಸಂಖ್ಯೆ ಎಷ್ಟು ; (ಅವರುಗಳ ಹೆಸರು, ವಿಳಾಸ ನೀಡುವುದು)

(ಆ) ಆ ಪೈಕಿ ಉದ್ಯೋಗ ಪಡೆದ ಅಭ್ಯರ್ಥಿಗಳ ವಿವರಗಳೇನು ;

(ಇ) ಯಾವ ಕಾರಣಕ್ಕಾಗಿ ಆ ಕೋಶವನ್ನು ಮುಚ್ಚಲಾಯಿತು ;

(ಈ) ಈ ಉದ್ಯೋಗ ವಿನಿಮಯ ಕೇಂದ್ರವನ್ನು ಪುನಃ ಪ್ರಾರಂಭಿಸಿ ಪರಿಶಿಷ್ಟ ಜಾತಿ/ಪಂಗಡದವರಿಗೆ ಅನುಕೂಲ ಕಲ್ಪಿಸಲು ಸರ್ಕಾರ ಮುಂದಾಗುವುದೇ ?

## ಪಿ.ಟಿ.ಸಿ.ಎಲ್. ಕಾಯಿದೆಗೆ ತಿದ್ದುಪಡಿ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೦೦ (೨೫೩೩) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಹಿತದೃಷ್ಟಿಯಿಂದ ತಂದಿದ್ದ ಪಿ.ಟಿ.ಸಿ.ಎಲ್. ಕಾಯಿದೆ ೧೯೭೮ರಲ್ಲಿ ಸರ್ಕಾರದಿಂದ ಪರಿಶಿಷ್ಟ ಜಾತಿ ಮತ್ತು ವರ್ಗದವರಿಗೆ ಮಂಜೂರಾಗಿದ್ದ ಜಮೀನನ್ನು ಬೇರೆಯವರಿಗೆ ಪರಭಾರೆ ಮಾಡುವುದನ್ನು ನಿಷೇಧಿಸಿದ್ದು, ಒಂದು ವೇಳೆ ಪರಭಾರೆ ಮಾಡಿದ್ದರೂ ಸಹ ಮತ್ತೆ SC/ST ಯವರಿಗೆ ವಾಪಸ್ ಕೊಡಿಸಲು ಅವಕಾಶ ಕಲ್ಪಿಸಿರುವುದು ನಿಜವಲ್ಲವೇ ;

(ಆ) ಈ ರೀತಿ ಪರಭಾರೆ ಮಾಡಿದ ಜಮೀನುಗಳನ್ನು ವಾಪಸ್ ಕೊಡಿಸಬೇಕೆಂದು ಕಾಯಿದೆಯಲ್ಲಿದ್ದರೂ ಅಪೀಲು ಹೋದಾಗ ಅನೇಕ ಅಸಿಸ್ಟೆಂಟ್ ಕಮೀಷನರ್ ಮತ್ತು ಡೆಪ್ಯೂಟಿ ಕಮೀಷನರ್‌ಗಳು SC/ST ಯವರ ವಿರುದ್ಧವಾಗಿ ತೀರ್ಪು ನೀಡುತ್ತಿದ್ದು, ಇದರಿಂದ ಈ ಜನಾಂಗದವರಿಗೆ ಅನ್ಯಾವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಭಾರತದ ಸರ್ವೋಚ್ಚ ನ್ಯಾಯಾಲಯದಲ್ಲಿ ನೆಕ್ಕುಂಟಿ ರಾಮಲಕ್ಷ್ಮಿ ವಿರುದ್ಧ ಕರ್ನಾಟಕ ಸರ್ಕಾರ ಮತ್ತು ಇನ್ನೊಂದು ಪ್ರಕರಣದಲ್ಲಿ ಪಿ.ಟಿ.ಸಿ.ಎಲ್. ಕಾಯಿದೆಯಲ್ಲಿ ಕಾಲಮಿತಿ ನಿಗದಿಗೊಳಿಸಬೇಕಾಗಿತ್ತೆಂದು ತಿಳಿಸಿರುವುದರಿಂದ ಅನೇಕ SC/ST ಜನಾಂಗಕ್ಕೆ ಅನ್ಯಾಯವಾಗುತ್ತಿದ್ದು ಕೆಲವು ಸಮಸ್ಯೆಗಳನ್ನು ಸರಿಪಡಿಸಲು ಪರಿಶಿಷ್ಟ ಜಾತಿ/ವರ್ಗಗಳ ಕೆಲ ಜಮೀನುಗಳ ಪರಭಾರೆ ನಿಷೇಧ ಕಾಯಿದೆ ೧೯೭೮ಕ್ಕೆ ಸರ್ಕಾರ ಸಮಗ್ರ ತಿದ್ದುಪಡಿ ತಂದು ಇವರ ಹಿತ ಕಾಪಾಡಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ ;

(ಈ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಹಿತದೃಷ್ಟಿಯಿಂದ ಈ ಸಮಗ್ರ ತಿದ್ದುಪಡಿಯನ್ನು ಯಾವ ಕಾಲಮಿತಿಯೊಳಗೆ ತರಲಾಗುವುದು ?

## ವಿವಿಧ ಮಾಶಾಸನ ಫಲಾನುಭವಿಗಳ ಸಂಖ್ಯೆ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೦೧ (೨೪೯೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ರಾಮನಗರ ಜಿಲ್ಲೆಯಲ್ಲಿ ಮಾಶಾಸನ ಪಡೆಯುತ್ತಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ಎಲ್ಲಾ ವಿವಿಧ ಮಾಶಾಸನ ಯೋಜನೆಗಳು ಸೇರಿದಂತೆ ಮಾಹಿತಿ ನೀಡುವುದು)

(ಆ) ಪ್ರಸ್ತುತ ರಾಮನಗರ ಜಿಲ್ಲೆಯ ಫಲಾನುಭವಿಗಳಿಗೆ ಯಾವ ತಿಂಗಳವರೆಗೆ ಮಾಶಾಸನ ನೀಡಲಾಗಿದೆ; ಯಾವ ತಿಂಗಳಿನಿಂದ ಇನ್ನೂ ಮಾಶಾಸನ ನೀಡದೆ ಬಾಕಿ ಉಳಿಸಲಾಗಿದೆ ;

(ಇ) ಪ್ರಸ್ತುತ ಸರ್ಕಾರದಿಂದ ರಾಮನಗರ ಜಿಲ್ಲೆಗೆ ಬಿಡುಗಡೆ ಮಾಡಿರುವ ಹಣವೆಷ್ಟು; ಇನ್ನೂ ಬಿಡುಗಡೆ ಮಾಡಬೇಕಾಗಿರುವ ಹಣವೆಷ್ಟು ?

## ರಾಜ್ಯದಲ್ಲಿ ಮುಜರಾಯಿ ಇಲಾಖೆಯಡಿಯಲ್ಲಿರುವ ದೇವಸ್ಥಾನಗಳ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೩೦೦೨ (೨೫೦೩) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮುಜರಾಯಿ ಇಲಾಖೆಯಡಿಯಲ್ಲಿ ಇರುವ ದೇವಸ್ಥಾನಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) ಅವುಗಳಲ್ಲಿ ಎಷ್ಟು ಶಿವ, ರಾಮ, ಕೃಷ್ಣ ದೇವರುಗಳ ದೇವಸ್ಥಾನಗಳಿವೆ ; (ಪ್ರತ್ಯೇಕವಾಗಿ ಮಾಹಿತಿ ನೀಡುವುದು)

(ಆ) ಮುಜರಾಯಿ ಇಲಾಖೆಯಡಿಯಲ್ಲಿ ಬರುವ ದೇವಸ್ಥಾನಗಳ ವರ್ಗೀಕರಿಸಿದ ವಿವರ ನೀಡುವುದು ;

(ಇ) ಸದರಿ ದೇವಸ್ಥಾನಗಳ ಸ್ಥಿರಾಸ್ತಿಗಳ ಕುರಿತು ದೇವಸ್ಥಾನವಾರು ಮಾಹಿತಿ ನೀಡುವುದು; ಈ ಪೈಕಿ ಒತ್ತುವರಿಯಾಗಿರುವ ಜಮೀನು ಪ್ರದೇಶಗಳ ವಿಸ್ತೀರ್ಣವೆಷ್ಟು; ಮತ್ತು ಸರ್ಕಾರದಿಂದ ವಶಪಡಿಸಿಕೊಂಡ ಜಮೀನು ಪ್ರದೇಶಗಳ ವಿಸ್ತೀರ್ಣವೆಷ್ಟು ; (ವಿವರ ನೀಡುವುದು)

(ಈ) ಬಾಕಿ ಉಳಿದ ಒತ್ತುವರಿ ಜಮೀನುಗಳನ್ನು ವಶಪಡಿಸಿಕೊಳ್ಳುವ ಕುರಿತು ಸರ್ಕಾರದ ಕ್ರಮವೇನು ? (ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ವಿವಿಧ ಯೋಜನೆಗಳ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೦೩ (೨೫೩೫) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಡಿ. ದೇವರಾಜ ಅರಸು ಭವನ ನಿರ್ಮಾಣಕ್ಕೆ ಮೀಸಲಿಟ್ಟ ಅನುದಾನ ಎಷ್ಟು; (ವಿವರವಾದ ಮಾಹಿತಿ ನೀಡುವುದು)

(ಆ) ಜಿಲ್ಲೆಯಲ್ಲಿ ಖಾಸಗಿ ಹಿಂದುಳಿದ ವಸತಿ ನಿಲಯಗಳು ಎಷ್ಟು; ಹಾಗೂ ಈ ವಸತಿ ನಿಲಯಗಳಿಗೆ ಎಷ್ಟು ಅನುದಾನ ನೀಡಲಾಗಿದೆ ;

(ಇ) ಜಿಲ್ಲೆಯಲ್ಲಿ ಅಲೆಮಾರಿ/ಅರೆ ಅಲೆಮಾರಿ ಜನಾಂಗದವರಿಗೆ ಅಭಿವೃದ್ಧಿ ಮಂಡಳಿಯಿಂದ ಮೂಲ ಸೌಕರ್ಯಕ್ಕಾಗಿ ಬಿಡುಗಡೆಯಾದ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ಅಲೆಮಾರಿ/ಅರೆ ಅಲೆಮಾರಿ ಜನಾಂಗದವರಿಗೆ ಅರಿವು ಮೂಡಿಸಲು ಹಮ್ಮಿಕೊಂಡಿರುವ ಕಾಯಕ್ರಮಗಳು ಯಾವುವು; (ವಿವರವಾದ ಮಾಹಿತಿ ನೀಡುವುದು)

(ಉ) ೨೦೧೮–೧೯ ರಿಂದ ೨೦೨೦–೨೧ರವರೆಗೆ ಇಲಾಖೆಯ ಅಧೀನದಲ್ಲಿ ಬರುವ ವಿವಿಧ ನಿಗಮ ಮಂಡಳಿಗಳು ಯಾವುವು ? (ತಾಲ್ಲೂಕುವಾರು ಆಯ್ಕೆ ಪಟ್ಟಿ, ಫಲಾನುಭವಿಗಳ ಪ್ರಗತಿ ಮಾಹಿತಿಯೊಂದಿಗೆ ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಯೋಜನೆ ಹಾಗೂ ಅನುದಾನದ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೦೪ (೨೫೩೭) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆ ಅಧೀನದಲ್ಲಿ ಬರುವ ಎಲ್ಲಾ ನಿಗಮ ಮಂಡಳಿಗಳಲ್ಲಿ ಫಲಾನುಭವಿಗಳ ಅಯ್ಕೆ ಮಾಡಲು ಇರುವ ಮಾನದಂಡಗಳೇನು ; (ಸರ್ಕಾರದ ಸುತ್ತೋಲೆ ನಡವಳಿಗಳ ಬಗ್ಗೆ ಸಂಪೂರ್ಣ ದಾಖಲಾತಿ ಪ್ರತಿಗಳ ಪೂರ್ಣ ಮಾಹಿತಿ ನೀಡುವುದು)

(ಆ) ಎಲ್ಲಾ ನಿಗಮ ಮಂಡಳಿಗಳಲ್ಲಿ ಆಯ್ಕೆ ಸಮಿತಿಗಳಿದ್ದು, ಯಾವುದೇ ನಿಗಮ ಮಂಡಳಿಯಿಂದ ಇಲ್ಲಿಯವರೆಗೆ ಸದಸ್ಯರನ್ನು ಆಯ್ಕೆ ಸಮಿತಿ ಸಭೆಗೆ ಆಹ್ವಾನಿಸಿಲ್ಲದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ೨೦೧೮-೧೯ ರಿಂದ ೨೦೨೦-೨೧ರವರೆಗೆ ನಡೆದ ಆಯ್ಕೆ ಸಮಿತಿಯ ಸಭೆ ದಿನಾಂಕ, ಸಮಯ, ಸ್ಥಳ, ಸಭೆಯ ನೋಟಿಸ್ ಪ್ರತಿ ಹಾಗೂ ಸಭೆಯ ನಡವಳಿ ಮತ್ತು ಮೂರು ವರ್ಷದ ಆಯ್ಕೆ ಪಟ್ಟಿಯೊಂದಿಗೆ ಸಂಪೂರ್ಣ ವರ್ಷವಾರು ಮಾಹಿತಿ ನೀಡುವುದು ;

(ಈ) ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡ ಅಭಿವೃದ್ಧಿ ನಿಗಮ ೨೦೧೮-೧೯ ರಿಂದ ೨೦೨೦-೨೧ರವರೆಗೆ ಆಯ್ಕೆ ಸಮಿತಿಯ ಸಭೆ ದಿನಾಂಕ, ಸಮಯ, ಸ್ಥಳ ಸಭೆಯ ನೋಟಿಸ್ ಪ್ರತಿ ಹಾಗೂ ಸಭೆಯ ನಡವಳಿ ಮತ್ತು ಮೂರು ವರ್ಷದ ಆಯ್ಕೆ ಪಟ್ಟಿಯ ಸಂಪೂರ್ಣ ವರ್ಷವಾರು ಮಾಹಿತಿ ನೀಡುವುದು ;

(ಉ) ೨೦೧೮-೧೯ ರಿಂದ ೨೦೧೯-೨೦ರವರೆಗೆ ಪ್ರಗತಿ ಕಾಲೋನಿ ಯೋಜನೆಯಡಿಯಲ್ಲಿ ಬೀದರ್ ಜಿಲ್ಲೆಗೆ ಬಂದಿರುವ ಅನುದಾನ ಎಷ್ಟು ; ಹಾಗೂ ಯಾವ ಯಾವ ಕಾಮಗಾರಿಗಳು ಪೂರ್ಣಗೊಂಡಿರುತ್ತವೆ/ಪ್ರಗತಿಯಲ್ಲಿರುತ್ತವೆ ? (ಸಂಪೂರ್ಣವಾದ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ವಿವಿಧ ಯೋಜನೆಗಳಿಗೆ ಮಂಜೂರಾದ ಅನುದಾನದ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೦೦೫ (೨೫೩೮) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೮-೧೯ ರಿಂದ ೨೦೨೦-೨೧ನೇ ಸಾಲಿನವರೆಗೆ ಬೀದರ್ ಜಿಲ್ಲೆಯ ಪಶುಸಂಗೋಪನೆ ಇಲಾಖೆಗೆ ಸಂಬಂಧಿಸಿದಂತೆ ಎಲ್ಲಾ ಯೋಜನೆಗಳಿಗೆ ಬಂದಿರುವ ಅನುದಾನ ಎಷ್ಟು ;

(ಆ) ಯಾವ ಯಾವ ಯೋಜನೆಗಳ ಅಡಿಯಲ್ಲಿ ಎಷ್ಟೆಷ್ಟು ಅನುದಾನ ಮಂಜೂರು ಮಾಡಲಾಗಿದೆ'; (ಪ್ರದೇಶದ ಪ್ರತಿಗಳ ಸಮೇತ ಸಂಪೂರ್ಣ ವಿವರ ನೀಡುವುದು)

(ಇ) ಮಂಜೂರಾದ ಅನುದಾನದಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ? (ಸಂಪೂರ್ಣ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಗ್ರಾಮೀಣ ಪ್ರದೇಶಗಳಿಗೆ ವಿವಿಧ ವಸತಿ ಯೋಜನೆ ಕಲ್ಪಿಸುವ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೦೦೬ (೨೫೪೯) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

ಅ) ಕಳೆದ ಮೂರು ವರ್ಷಗಳಲ್ಲಿ ಜಿಲ್ಲೆಯಲ್ಲಿ ಗ್ರಾಮೀಣ ಪ್ರದೇಶಗಳಿಗೆ ವಿವಿಧ ವಸತಿ ಯೋಜನೆಗಳ ಅಡಿಯಲ್ಲಿ ಆಯ್ಕೆಯಾದ ಫಲಾನುಭವಿಗಳ ಸಂಖ್ಯೆ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ವಸತಿ ಇಲಾಖೆಯಲ್ಲಿ ಬರುವ ಬಸವ ವಸತಿ ಯೋಜನೆ, ಡಾ॥ ಬಿ.ಆರ್. ಅಂಬೇಡ್ಕರ ವಸತಿ ಯೋಜನೆ, ದೇವರಾಜು ಅರಸು ವಸತಿ ಯೋಜನೆ, ಪ್ರಧಾನ ಮಂತ್ರಿ ಅವಾಜ್ ಯೋಜನೆಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು ; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಇ) ೨೦೨೦–೨೧ನೇ ಸಾಲಿನಲ್ಲಿ ವಸತಿ ಯೋಜನೆಯಡಿಯಲ್ಲಿ ಜಿಲ್ಲೆಗೆ ಮೀಸಲಿಟ್ಟಿರುವ ಭೌತಿಕ ಆರ್ಥಿಕ ಅನುದಾನವೆಷ್ಟು ? (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಭೂ ಪರಿವರ್ತನೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೦೭ (೨೫೨೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಭೂ ಪರಿವರ್ತನೆಯನ್ನು ಕೈಬಿಡುವ ಉದ್ದೇಶ ಸರ್ಕಾರಕ್ಕಿದೆಯೇ ;

(ಆ) ನೆರೆ ರಾಜ್ಯಗಳಲ್ಲಿ ಭೂ ಪರಿವರ್ತನೆ ಇಲ್ಲದಿರುವ ಮಾಹಿತಿ ಸರ್ಕಾರಕ್ಕಿದೆಯೇ; ಭೂ ಪರಿವರ್ತನೆಯಿಂದ ಆಗುತ್ತಿರುವ ಶೋಷಣೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಮಾಸ್ಟರ್ ಪ್ಲಾನ್ ಮಾಡಿರುವ ಆಧಾರದ ಮೇಲೆ ನಿಗದಿಪಡಿಸುವ ಉದ್ದೇಶದನ್ವಯ ಶುಲ್ಕವನ್ನು ಆನ್‌ಲೈನ್ ಮುಖಾಂತರ ಪಾವತಿ ಮಾಡಿ ಭೂ ಪರಿವರ್ತನೆ ಮಾಡಲು ಸರ್ಕಾರಕ್ಕಿರುವ ತೊಂದರೆಯೇನು ?

## ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಲಯಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೦೮ (೨೫೨೨) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಎಷ್ಟು ವಿದ್ಯಾರ್ಥಿನಿಲಯಗಳನ್ನು ನಡೆಸಲಾಗುತ್ತಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ವಿದ್ಯಾರ್ಥಿನಿಲಯಗಳಿಗೆ ಹೆಚ್ಚಿನ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಹೊಸದಾಗಿ ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ನಿಗದಿತ ಪ್ರಮಾಣದ ಗುರಿಗಿಂತ ಹೆಚ್ಚಿನ ಅರ್ಜಿಗಳು ರಾಜ್ಯದ್ಯಾಂತ ಸ್ವೀಕೃತವಾಗಿದ್ದು, ಈ ಬಗ್ಗೆ ವಿದ್ಯಾರ್ಥಿಗಳಿಗೆ ಅವಕಾಶ ಕಲ್ಪಿಸಲು ಸರ್ಕಾರದಿಂದ ಯಾವ ಕ್ರಮ ತೆಗೆದುಕೊಳ್ಳಲಾಗುವುದು ?

## ಮೀನುಗಾರಿಕೆ ಇಲಾಖೆಯ ವೃಂದ ಮತ್ತು ನಿಯಮಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೦೯ (೨೫೨೩) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೀನುಗಾರಿಕೆ ಇಲಾಖೆಯಲ್ಲಿ ಮಂಜೂರಾದ ಭರ್ತಿಯಾದ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಹೊರಗುತ್ತಿಗೆ ಮೂಲಕ ನೇಮಕ ಮಾಡಿಕೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಯಾವ ಕಛೇರಿಗಳಲ್ಲಿ ಯಾವ ಏಜೆನ್ಸಿಗಳ ಮೂಲಕ ನೇಮಕ ಮಾಡಿಕೊಳ್ಳಲಾಗಿದೆ; ಹಾಗೂ ಅವರುಗಳಿಗೆ ಪಾವತಿಸುತ್ತಿರುವ ವೇತನ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಇ) ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮವನ್ನು ಯಾವಾಗ ರೂಪಿಸಲಾಗಿದೆ ಪ್ರತಿ ೩ ವರ್ಷಕ್ಕೊಮ್ಮೆ ನಿಯಮಗಳನ್ನು ಪರಿಷ್ಕರಿಸುವಂತೆ ಸರ್ಕಾರದ ಆದೇಶ ಇದ್ದರೂ ಸಹ, ಪ್ರಚಲಿತ ಅವಶ್ಯಕತೆಗೆ ಅನುಗುಣವಾಗಿ ತಿದ್ದುಪಡಿ ಮಾಡದಿರುವುದಕ್ಕೆ ಕಾರಣವೇನು ;

(ಈ) ಯಾವ ಕಾಲಮಿತಿಯೊಳಗೆ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪರಿಷ್ಕರಿಸಲಾಗುವುದು ;

(ಉ) ಎಲ್ಲಾ ಇಲಾಖೆಗಳಲ್ಲಿ ತಾಲ್ಲೂಕು ಕಛೇರಿಗಳಲ್ಲಿ ಲಿಪಿಕ/ಡಾಟಾ ಅಪರೇಟರ್ ನೌಕರರಿದ್ದು, ಇಲಾಖೆಯಲ್ಲಿ ಈ ರೀತಿಯಾಗಿ ಯಾವುದೇ ಸಿಬ್ಬಂದಿಯ ಹುದ್ದೆಗಳನ್ನು ಸೃಜಿಸಲು/ ಉನ್ನತಿಕರಿಸದಿರಲು ಕಾರಣವೇನು; ಈ ಬಗ್ಗೆ ಸರ್ಕಾರದ ನಿಲುವೇನು ?

## ಮುಜರಾಯಿ ಇಲಾಖೆಯಿಂದ ನಿರ್ವಹಿಸುತ್ತಿರುವ ಛತ್ರಗಳ ನಿರ್ವಹಣೆ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೦೧೦ (೨೫೨೫) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮುಜರಾಯಿ ಇಲಾಖೆಯಿಂದ ಧಾರ್ಮಿಕ ಸ್ಥಳಗಳಲ್ಲಿ ಭಕ್ತಾಧಿಗಳಿಗಾಗಿ ಎಲ್ಲೆಲ್ಲಿ ಕರ್ನಾಟಕ ಛತ್ರಗಳನ್ನು ನಿರ್ಮಿಸಲಾಗಿದೆ; ಯಾವಾಗ ನಿರ್ಮಿಸಲಾಗಿದೆ ; (ವಿವರ ನೀಡುವುದು)

(ಆ) ನಿರ್ಮಿಸಲಾಗಿರುವ ಛತ್ರಗಳಲ್ಲಿ ಯಾವ ಯಾವ ಮೂಲಭೂತ ಸೌಲಭ್ಯಗಳನ್ನು ಭಕ್ತಾಧಿಗಳಿಗೆ ಒದಗಿಸಲಾಗಿದೆ; ಕಳೆದ ೩ ವರ್ಷಗಳಲ್ಲಿ ನಿರ್ವಹಣೆಗಾಗಿ ಎಷ್ಟು ಅನುದಾನವನ್ನು ವೆಚ್ಚ ಮಾಡಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ಛತ್ರಗಳಲ್ಲಿ ಸೂಕ್ತವಾದ ನಿರ್ವಹಣೆ ಮಾಡದಿರುವುದರಿಂದ ಮೂಲಭೂತ ಸೌಕರ್ಯಗಳಿಲ್ಲದೆ ಭಕ್ತಾಧಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಯಾವ ಕ್ರಮ ತೆಗೆದುಕೊಳ್ಳಲಾಗುವುದು ?

## ಟೋಲ್‌ಗಳ ಬಳಿ ಇರುವ ಅಂಗಡಿ/ಮಳಿಗೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೦೧೧ (೨೫೨೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯಲ್ಲಿ ಲೋಕೋಪಯೋಗಿ ಇಲಾಖೆಗೆ ಒಳಪಡುವ ರಸ್ತೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಸದರಿ ರಸ್ತೆಗಳ ನಿರ್ವಹಣೆಗಾಗಿ ವೆಚ್ಚ ಮಾಡಲಾದ ಮೊತ್ತವೆಷ್ಟು ; (ಕಾಮಗಾರಿಗಳ ವಿವರ ನೀಡುವುದು)

(ಇ) ರಾಷ್ಟ್ರೀಯ ಹೆದ್ದಾರಿಗಳಲ್ಲಿ ಟೋಲ್‌ಗಳನ್ನು ನಿರ್ವಹಿಸುತ್ತಿದ್ದು, ಇದಕ್ಕಾಗಿ ಭೂಸ್ವಾಧೀನ ಮಾಡಿಕೊಳ್ಳಲಾಗಿದೆಯೇ; ಆದರೆ ಟೋಲ್‌ಗಳ ಬಳಿ ಅನಧಿಕೃತವಾಗಿ ಅಂಗಡಿ ಮಳಿಗೆಗಳನ್ನು ನಿರ್ಮಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು ?

## ಮೇಲುಕೋಟೆಯಲ್ಲಿ ವಸತಿ ಮತ್ತು ಮೂಲ ಸೌಲಭ್ಯಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೧೨ (೨೫೩೧) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯ ಮೇಲುಕೋಟೆಯಲ್ಲಿ ಶ್ರೀ ಚೆಲುವನಾರಾಯಣಸ್ವಾಮಿ ದೇವಸ್ಥಾನ ಪ್ರಸಿದ್ಧ ದೇವಸ್ಥಾನವಾಗಿದ್ದು, ಅಲ್ಲಿಗೆ ಪ್ರತಿ ದಿನ ನೂರಾರು ಭಕ್ತಾಧಿಗಳು ಭೇಟಿ ನೀಡುತ್ತಿದ್ದು, ಅಲ್ಲಿ ತಂಗುದಾಣ, ವಸತಿ ಸೌಲಭ್ಯ, ಕುಡಿಯುವ ನೀರು, ಶೌಚಾಲಯಗಳ ವ್ಯವಸ್ಥೆ ಕಲ್ಪಿಸಲು ಸರ್ಕಾರ ಕ್ರಮ ವಹಿಸುವುದೇ ;

(ಆ) ಮುಜರಾಯಿ ಇಲಾಖೆ ವತಿಯಿಂದ ಈ ಬಗ್ಗೆ ಯೋಜನೆಯನ್ನೇನಾದರೂ ರೂಪಿಸಲಾಗಿದೆಯೇ; ರೂಪಿಸದಿದ್ದಲ್ಲಿ, ಈಗಲಾದರೂ ಈ ಸೌಲಭ್ಯಗಳನ್ನು ಒದಗಿಸಲು ಯೋಜನೆ ಹಮ್ಮಿಕೊಳ್ಳಲಾಗುವುದೇ ;

(ಇ) ಯಾವ ಕಾಲಮಿತಿಯಲ್ಲಿ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗುವುದು ?

## SC/ST ಹಾಸ್ಟೆಲ್‌ಗಳ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೧೩ (೨೫೩೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ವಿದ್ಯಾರ್ಥಿಗಳಿಗಾಗಿ ಎಷ್ಟು ಹಾಸ್ಟಲ್‌ಗಳಿವೆ ; ಎಷ್ಟು ವಿದ್ಯಾರ್ಥಿಗಳು ಆ ಹಾಸ್ಟೆಲ್‌ಗಳಲ್ಲಿ ವಾಸ್ತವ್ಯವಿದ್ದಾರೆ ;

(ಆ) ಅನೇಕ ಹಾಸ್ಟಲ್‌ಗಳಲ್ಲಿ ಮೂಲ ಸೌಲಭ್ಯಗಳ ಕೊರತೆಯಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ರಾಜ್ಯದಲ್ಲಿ ಹೊಸದಾಗಿ ವಿಶ್ವವಿದ್ಯಾನಿಲಯಗಳು ಪ್ರಾರಂಭವಾಗಿದ್ದು ಅಲ್ಲಿನ SC/ST ವಿದ್ಯಾರ್ಥಿಗಳಿಗಾಗಿ ಅವಶ್ಯಕವಾದ ಹಾಸ್ಟೆಲ್ ಸೌಲಭ್ಯದ ಕೊರತೆಯಿದ್ದು, ಈ ಕೊರತೆ ನೀಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ರಾಷ್ಟ್ರೀಯ ಹೆದ್ದಾರಿಗಳಲ್ಲಿ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೧೪ (೨೪೬೫) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ–ಮೈಸೂರು, ಬಾಣವಾರ–ಹುಳಿಯೂರು ಮತ್ತು ತುಮಕೂರು–ಶಿವಮೊಗ್ಗ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಗಳಡಿ

ಅಂದಾಜು ಪಟ್ಟಿಯಂತೆ ಕೈಗೊಳ್ಳಬೇಕಾದ ಕಾಮಗಾರಿಗಳು ಯಾವುವು; ಯಾರಿಗೆ ಗುತ್ತಿಗೆ ನೀಡಲಾಗಿದೆ; ಗುತ್ತಿಗೆ ನೀಡಲು ಪಾಲಿಸಲಾದ ನಿಯಮ/ಮಾನದಂಡಗಳೇನು ; (ಒಪ್ಪಂದದ ಪತ್ರದೊಂದಿಗೆ ವಿವರ ನೀಡುವುದು)

(ಆ) ಸದರಿ ಹೆದ್ದಾರಿಗಳಲ್ಲಿನ ಕಾಮಗಾರಿಗಳು ಯಾವ ಹಂತದಲ್ಲಿವೆ; ಈ ಕಾಮಗಾರಿಗಳಿಗಾಗಿ ಮಂಜೂರಾದ ಹಾಗೂ ಬಿಡುಗಡೆಯಾದ ಅನುದಾನ ಎಷ್ಟು ; ಇದರಲ್ಲಿ ಗುತ್ತಿಗೆದಾರರಿಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; (ಕಾಮಗಾರಿವಾರು ವಿವರ ನೀಡುವುದು)

(ಇ) ಮೂರು ಕಾಮಗಾರಿಗಳಲ್ಲಿ ಗುತ್ತಿಗೆದಾರರಿಗೆ ಅನುಕೂಲ ಮಾಡಿಕೊಡುವ ಸಲುವಾಗಿ ಕಾಮಗಾರಿಗಳನ್ನು ಪೂರ್ಣಗೊಳಿಸದಿದ್ದರೂ ಕೂಡ (ಪೂರ್ತಿ ಪ್ರಗತಿಗಿಂತ ಹೆಚ್ಚಿನದಾಗಿ) ಕಾಮಗಾರಿಗಳನ್ನು ಮಾಡಲಾಗಿದೆಯೆಂದು ಗುತ್ತಿಗೆದಾರರಿಗೆ ಬಿಲ್ಲು ಪಾವತಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕೆಲವು ಸ್ಥಳಗಳಲ್ಲಿ ಕಳಪೆ ಗುಣಮಟ್ಟದ ಕಾಮಗಾರಿಗಳು ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇವರುಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಈ ಕಾಮಗಾರಿಗಳನ್ನು ಕೈಗೊಳ್ಳಲು ಭೂಸ್ವಾಧೀನ ಮಾಡಿಕೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಮಾಡಲಾಗಿದೆ ಹಾಗೂ ಯಾವ ರೀತಿ ಪರಿಹಾರ ನೀಡಲಾಗಿದೆ; ಅಥವಾ ಇನ್ನೂ ಭೂಸ್ವಾಧೀನ ಮಾಡಲು ಬಾಕಿ ಇದೆಯೇ; ಇದ್ದಲ್ಲಿ, ಕಾರಣಗಳೇನು ; (ಯೋಜನೆವಾರು, ಪ್ರಕರಣವಾರು ವಿವರವಾದ ಮಾಹಿತಿ ನೀಡುವುದು)

(ಉ) ಈ ಮೂರು ಕಾಮಗಾರಿಗಳನ್ನು ಕೈಗೊಳ್ಳಲು ರಸ್ತೆ ಬದಿಯ ಎಷ್ಟು ಮರಗಳನ್ನು ತೆರವುಗೊಳಿಸಲಾಗಿದೆ; ಯಾವ ರೀತಿ ಹರಾಜು ಮಾಡಲಾಗಿದೆ ; ಯಾವ ತಳಿಯ ಮರಗಳನ್ನು ತೆರವುಗೊಳಿಸಲಾಗಿದೆ ; (ಯೋಜನೆವಾರು ವಿವರ ನೀಡುವುದು)

(ಊ) ತೆರವುಗೊಳಿಸಿದ ಮರಗಳ ಬದಲಾಗಿ ಎಷ್ಟು ಗಿಡಗಳನ್ನು ಎಲ್ಲೆಲ್ಲಿ ನೆಡಲಾಗಿದೆ; ಯಾವ ತಳಿಯ ಗಿಡಗಳನ್ನು ನೆಡಲಾಗಿದೆ; ಇದಕ್ಕಾಗಿ ಮೀಸಲಿಡಲಾದ ಹಣ ವೆಷ್ಟು ? (ವಿವರವಾದ ಮಾಹಿತಿ ನೀಡುವುದು)

## ರಾಷ್ಟ್ರೀಯ ಹೆದ್ದಾರಿಗಳಲ್ಲಿರುವ ಟೋಲ್ ಪ್ಲಾಜಾಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೧೫ (೨೪೬೪) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ರಾಷ್ಟ್ರೀಯ ಹೆದ್ದಾರಿಗಳಲ್ಲಿರುವ ಟೋಲ್ ಪ್ಲಾಜಗಳ ಸಂಖ್ಯೆ ಎಷ್ಟು; ಅವು ಯಾವುವು; ಈ ಟೋಲ್‌ಗಳ ಟೆಂಡರ್‌ದಾರರು ಯಾರು, ಟೆಂಡರ್ ಅವಧಿ ಎಷ್ಟು ; (ಅವರೊಂದಿಗೆ ಸರ್ಕಾರ ಮಾಡಿಕೊಂಡಿರುವ ಒಪ್ಪಂದದ ಪತ್ರದೊಂದಿಗೆ ವಿವರ ನೀಡುವುದು)

(ಆ) ಸರ್ಕಾರದ ನಿಯಮಗಳಂತೆ ಈ ಟೋಲ್‌ಗಳಲ್ಲಿ ಪ್ರಯಾಣಿಕರಿಗೆ ಒದಗಿಸಬೇಕಾದ ಸೇವೆ/ಸೌಲಭ್ಯಗಳೇನು ; (ಆದೇಶಗಳ ಸಹಿತ ವಿವರವಾದ ಮಾಹಿತಿ ನೀಡುವುದು)

(ಇ) ಬೆಂಗಳೂರು ಹಾಸನ ಹೆದ್ದಾರಿಯಲ್ಲಿರುವ ಸೋಲೂರು ಬಳಿಯ ಟೋಲ್ ಪ್ಲಾಜ, ಬೆಳ್ಳೂರು ಕ್ರಾಸ್ ಟೋಲ್ ಪ್ಲಾಜ, ದೇವಿಹಳ್ಳಿ ಟೋಲ್ ಪ್ಲಾಜ (ಶಾಂತಿ ಗ್ರಾಮ) ಕದಬಳ್ಳಿ ಟೋಲ್ ಪ್ಲಾಜಗಳ ಟೆಂಡರ್‌ದಾರರು ಸರ್ಕಾರದ ನಿಯಮಗಳನ್ನು ಹಾಗೂ ಒಪ್ಪಂದ ಪತ್ರದಲ್ಲಿ ತಿಳಿಸಿರುವ ನಿಯಮಗಳನ್ನು ಪಾಲನೆ ಮಾಡದಿರುವುದರಿಂದ ಸಾರ್ವಜನಿಕರಿಗೆ/ಪ್ರಯಾಣಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಹಾಗಿದ್ದಲ್ಲಿ, ಈ ಸಂಬಂಧ ಸಾರ್ವಜನಿಕರಿಂದ ಸ್ವೀಕೃತವಾಗಿರುವ ದೂರುಗಳೆಷ್ಟು ; (ದಾಖಲೆಗಳೊಂದಿಗೆ ಪ್ರಕರಣವಾರು ವಿವರ ನೀಡುವುದು)

(ಉ) ಈ ಟೋಲ್‌ಗಳಲ್ಲಿ ಫಾಸ್ಟ್ ಟ್ಯಾಗ್ ಸೆನ್ಸಾರ್‌ಗಳು ಸರಿಯಾಗಿ ಕೆಲಸ ಮಾಡದಿರುವುದರಿಂದ ಮತ್ತು ಅಂಬುಲೆನ್ಸ್ ಹಾಗೂ ವಿ.ಐ.ಪಿ ವಾಹನಗಳ ಸಂಚಾರಕ್ಕೆ ಪ್ರತ್ಯೇಕ ಲೇನ್ ಬಿಡದಿರುವುದರಿಂದ ಪ್ರಯಾಣಿಕರು/ಸಾರ್ವಜನಿಕರು ಗಂಟೆಗಟ್ಟಲೆ ಕಾಯಬೇಕಾದ ಪರಿಸ್ಥಿತಿ ಬಂದಿದ್ದು, ಇದರಿಂದಾಗಿ ಪ್ರಯಾಣಿಕರು/ಸಾರ್ವಜನಿಕರಿಗೆ ತುಂಬಾ ತೊಂದರೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿರುವ ಕುಕ್ಕುಟೋದ್ಯಮ ಹಾಗೂ ಪ್ರಾಣಿಗಳ ಸಾಕಾಣಿಕೆ ಬಗ್ಗೆ

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೧೬ (೨೫೪೦) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರತಿ ತಿಂಗಳು ಹಾಗೂ ಪ್ರತಿ ವರ್ಷದ ಮಾಂಸ ಮಾರಾಟದ ವಹಿವಾಟಿನ ಮೊತ್ತವೆಷ್ಟು; ಸರ್ಕಾರ ಪ್ರತಿ ಕೆ.ಜಿಯ ಕೋಳಿ, ಕುರಿ ಹಾಗೂ ಇತರೆ ಪ್ರಾಣಿಗಳ ಮಾಂಸಕ್ಕೆ ನಿಗದಿಪಡಿಸಿದ ದರ ಎಷ್ಟು ;

(ಆ) ಕುಕ್ಕುಟೋದ್ಯಮ, ಕುರಿ ಮೇಕೆಗಳ ವಾರ್ಷಿಕ ವಹಿವಾಟು ಎಷ್ಟು;

(ಇ) ರಾಜ್ಯದಲ್ಲಿ ಕುಕ್ಕುಟೋದ್ಯಮ, ಕುರಿ, ಮೇಕೆ ಹಾಗೂ ಮೊಲ ಸಾಕಾಣಿಕೆಯನ್ನು ಉತ್ತೇಜಿಸಲು ಸರ್ಕಾರ ಕೈಗೊಂಡ ಯೋಜನೆಗಳಾವುವು ; (ಪೂರ್ಣ ಮಾಹಿತಿ ನೀಡುವುದು)

(ಈ) ಕುರಿ, ಮೇಕೆ, ಕೋಳಿ ಹಾಗೂ ಮೊಲ ಸಾಕಾಣಿಕೆ ಬಗ್ಗೆ ಮಾಹಿತಿ ಪಡೆಯುವುದು ಹೇಗೆ ? (ಜಿಲ್ಲಾವಾರು ಮಾಹಿತಿ ನೀಡುವುದು)

## ದಾಖಲೆಗಳ ಸಂರಕ್ಷಣೆಗೆ ಕೈಗೊಂಡಿರುವ ಕ್ರಮದ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೧೭ (೨೪೯೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆಕಾರ್ ಬಂದ್ ಮತ್ತು ಟಿಪ್ಪಣಿಗಳ ರಕ್ಷಣೆಗೆ ಸಂರಕ್ಷಣೆಗೆ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಆ) ಸಾರ್ವಜನಿಕರಿಗೆ ಆರ್.ಟಿ.ಸಿ ಗಳನ್ನು ವಿತರಿಸುವ ರೀತಿ ಆಕಾರ್ ಬಂದ್ ಟಿಪ್ಪಣಿಗಳನ್ನು ವಿತರಿಸಲಾಗುತ್ತಿದೆಯೇ; ಇಲ್ಲದಿದ್ದಲ್ಲಿ, ಈ ಬಗ್ಗೆ ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು ?

## ಜಿಲ್ಲೆಯಲ್ಲಿ ಪ್ರಸ್ತುತ ಪೋಡಿಗಾಗಿ ಸಲ್ಲಿಕೆಯಾದ ಅರ್ಜಿಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೦೧೮ (೨೪೮೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಸ್ತುತ ೦೧.೦೧.೨೦೨೧ ರಿಂದ ದಿ:೧೨.೦೩.೨೦೨೧ರವರೆಗೆ ರಾಮನಗರ ಜಿಲ್ಲೆಯಲ್ಲಿ ಪೋಡಿಗಾಗಿ ಸಲ್ಲಿಕೆಯಾಗಿರುವ ಅರ್ಜಿಗಳೆಷ್ಟು; ಇದರಲ್ಲಿ ಎಷ್ಟು ಅರ್ಜಿಗಳನ್ನು ವಿಲೇವಾರಿ ಮಾಡಲಾಗಿದೆ; ಬಾಕಿ ಇರುವ ಅರ್ಜಿಗಳೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಪ್ರಸ್ತುತ ರಾಮನಗರ ಜಿಲ್ಲೆಯಲ್ಲಿ ಎಷ್ಟು ಸರ್ವೆ ಅರ್ಜಿಗಳು ಬಾಕಿ ಉಳಿದಿವೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಪ್ರಸ್ತುತ ರಾಮನಗರ ಜಿಲ್ಲೆಯಲ್ಲಿ ಆರ್.ಟಿ.ಸಿ ದುರಸ್ತಿಗಾಗಿ ಬಂದ ಅರ್ಜಿಗಳು ಎಷ್ಟು; ಬಾಕಿ ಇರುವ ಅರ್ಜಿಗಳು ಎಷ್ಟು ?

## ಭೂ-ಒಡೆತನ ಯೋಜನೆಗೆ ಅರ್ಜಿ ಸಲ್ಲಿಸಿರುವವರ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೦೧೯ (೨೪೯೨) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೨ ವರ್ಷಗಳಿಂದ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ ಮತ್ತು ಡಾ:ಬಿ.ಆರ್. ಅಂಬೇಡ್ಕರ್ ನಿಗಮದ ವತಿಯಿಂದ ಭೂ ಒಡೆತನ ಯೋಜನೆಗಳಿಗೆ ಅರ್ಜಿ ಸಲ್ಲಿಸಿರುವವರ ಸಂಖ್ಯೆ ಎಷ್ಟು;

(ಆ) ಎಷ್ಟು ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ; ಆಯ್ಕೆಯನ್ನು ಮಾಡುವಾಗ ನಕಲಿ ಪ್ರಮಾಣ ಪತ್ರಗಳನ್ನು ನೀಡಿ ಭೂಮಿಯನ್ನು ಪಡೆದವರ ಸಂಖ್ಯೆ ಎಷ್ಟು ;

(ಇ) ಈ ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## SCP/TSP ಅನುದಾನ ಸಮರ್ಪಕವಾಗಿ ಬಳಕೆಯಾಗದೇ ಇರುವ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೨೦ (೨೫೧೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗಾಗಿ ಮೀಸಲಿರಿಸಿದ ಅನುದಾನ SCP/TSP ಯೋಜನೆಯಡಿ ಅಭಿವೃದ್ಧಿ ಕಾರ್ಯಗಳಿಗೆ ಸಮರ್ಪಕವಾಗಿ ಬಳಕೆಯಾಗದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ೨೦೧೮–೧೯, ೨೦೧೯–೨೦ ಮತ್ತು ೨೦೨೦–೨೧ ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಗೆ SCP/TSP ಯೋಜನೆಯಡಿ ಹಂಚಿಕೆಯಾದ ಒಟ್ಟು ಅನುದಾನವೆಷ್ಟು ; ಬಳಕೆಯಾದ ಅನುದಾನವೆಷ್ಟು ; ಉಳಿಕೆ ಅನುದಾನವೆಷ್ಟು ; (ವರ್ಷವಾರು, ಇಲಾಖಾವಾರು ವಿವರ ಒದಗಿಸುವುದು)

(ಇ) SCP/TSP ಯೋಜನೆಯಡಿ ಅನುದಾನ ಬಾಕಿ ಉಳಿಯಲು ಕಾರಣವೇನು ; ಬಳಸದೇ ಇರುವ ಇಲಾಖಾ ಅಧಿಕಾರಿಗಳ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ೨೦೧೮-೧೯, ೨೦೧೯-೨೦ ಮತ್ತು ೨೦೨೦-೨೧ನೇ ಸಾಲಿನಲ್ಲಿ ಬೆಳಗಾವಿ ಜಿಲ್ಲೆಯಲ್ಲಿ SCP/TSP ಯೋಜನೆಯಡಿ ಯಾವ ಯಾವ ಅಭಿವೃದ್ಧಿ ಕಾರ್ಯಗಳನ್ನು ಹಮ್ಮಿಕೊಳ್ಳಲಾಗಿದೆ ; (ವಿಧಾನಸಭಾ ಕ್ಷೇತ್ರವಾರು ಸಂಪೂರ್ಣ ವಿವರ ಒದಗಿಸುವುದು)

(ಉ) ಪ್ರಸಕ್ತ ೨೦೨೧-೨೨ನೇ ಸಾಲಿಗೆ SCP/TSP ಯೋಜನೆಯಡಿ ಅಭಿವೃದ್ಧಿ ಕಾರ್ಯಗಳಿಗೆ ಯಾವ ಯಾವ ಇಲಾಖೆಗಳಿಗೆ ಎಷ್ಟೆಷ್ಟು ಅನುದಾನ ಒದಗಿಸಲಾಗುವುದು ? (ಸಂಪೂರ್ಣ ವಿವರ ಒದಗಿಸುವುದು)

## ಆರ್ಥಿಕವಾಗಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ವಸತಿ ನಿಲಯಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೩೦೨೧ (೨೫೧೧) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಳಗಾವಿ ಜಿಲ್ಲೆಯಲ್ಲಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಆರ್ಥಿಕವಾಗಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ವಸತಿ ನಿಲಯಗಳು ಸ್ವಂತ ಕಟ್ಟಡಗಳಿಲ್ಲದೆ ಮೂಲ ಸೌಲಭ್ಯಗಳ ಕೊರತೆಯಿಂದ ಬಳಲುತ್ತಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಆರ್ಥಿಕವಾಗಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ವಸತಿ ನಿಲಯಗಳಿಗೆ ಮೂಲ ಸೌಲಭ್ಯ ಹಾಗೂ ಸ್ವಂತ ಕಟ್ಟಡಗಳನ್ನು ನಿರ್ಮಿಸುವ ಸಂಬಂಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಬೆಳಗಾವಿ ಜಿಲ್ಲೆಯಲ್ಲಿ ಇರುವ ಒಟ್ಟು ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿವಿಧ ವಿದ್ಯಾರ್ಥಿ ವಸತಿ ನಿಲಯಗಳು ಎಷ್ಟು ; ಅವು ಯಾವುವು ;

(ಈ) ಪ್ರತಿ ವರ್ಷ ಎಷ್ಟು ವಿದ್ಯಾರ್ಥಿಗಳಿಗೆ ವಸತಿ ಸೌಲಭ್ಯ ಕಲ್ಪಿಸಲಾಗುವುದು ; (ವರ್ಗವಾರು ವಿವರ ನೀಡುವುದು)

(ಉ) ಸದರಿ ವಸತಿ ನಿಲಯಗಳಿಗೆ ಸ್ವಂತ ಕಟ್ಟಡ ಮತ್ತು ಅಗತ್ಯ ಮೂಲ ಸೌಲಭ್ಯಗಳನ್ನು ಯಾವ ಕಾಲಮಿತಿಯಲ್ಲಿ ಒದಗಿಸಲಾಗುವುದು ? (ವಿವರ ನೀಡುವುದು)

## ಬೆಳಗಾವಿ ಜಿಲ್ಲೆಯಲ್ಲಿ ನೂತನವಾಗಿ ರಚಿಸಲಾದ ತಾಲ್ಲೂಕುಗಳಲ್ಲಿ ಸಿಬ್ಬಂದಿ ಮತ್ತು ಮೂಲ ಸೌಲಭ್ಯ ಕೊರತೆ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೨೨ (೨೫೦೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿ ನೂತನವಾಗಿ ರಚಿಸಲಾಗಿರುವ ನಿಪ್ಪಾಣಿ, ಕಿತ್ತೂರು, ಮೂಡಲಗಿ ಮತ್ತು ಯರಗಟ್ಟಿ ತಾಲ್ಲೂಕುಗಳಲ್ಲಿ ಮೂಲ ಸೌಕರ್ಯ ಹಾಗೂ ಅಗತ್ಯ ಸಿಬ್ಬಂದಿಗಳಿಲ್ಲದೆ ಸಾರ್ವಜನಿಕ ಕೆಲಸ ಕಾರ್ಯಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ನೂತನವಾಗಿ ರಚಿಸಿರುವ ತಾಲ್ಲೂಕುಗಳಿಗೆ ಅಗತ್ಯ ಸಿಬ್ಬಂದಿಗಳನ್ನು ಮತ್ತು ಕಛೇರಿಗಳಿಗೆ ಮೂಲ ಸೌಲಭ್ಯಗಳು ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಬೆಳಗಾವಿ ಜಿಲ್ಲೆಯಲ್ಲಿ ನೂತನವಾಗಿ ರಚಿಸಲಾದ ತಾಲ್ಲೂಕುಗಳಿಗೆ ಮಂಜೂರಾದ ಒಟ್ಟು ಹುದ್ದೆಗಳೆಷ್ಟು ; ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು ; (ವೃಂದವಾರು ವಿವರ ಒದಗಿಸುವುದು)

(ಈ) ನೂತನವಾಗಿ ತಾಲ್ಲೂಕುಗಳಿಗೆ ಮಿನಿ ವಿಧಾನಸೌಧ ನಿರ್ಮಿಸುವ ಕುರಿತು ಸರ್ಕಾರದ ನಿಲುವೇನು ; ಅವುಗಳಿಗೆ ಅನುದಾನ ಒದಗಿಸುವ ಮತ್ತು ಸ್ಥಳಗಳನ್ನು ನಿಗದಿ ಮಾಡುವ ಕುರಿತು ಸಂಪೂರ್ಣ ವಿವರ ಒದಗಿಸುವುದು ;

(ಉ) ಯಾವ ಕಾಲಮಿತಿಯಲ್ಲಿ ನೂತನ ತಾಲ್ಲೂಕುಗಳು ಸಂಪೂರ್ಣ ಸಿಬ್ಬಂದಿಗಳು/ಸೌಲಭ್ಯಗಳಿಂದ ಸದೃಢವಾಗಿ ಕಾರ್ಯಾರಂಭ ಮಾಡುವುವು ?

## ಸಾಮೂಹಿಕ ವಿವಾಹ ಯೋಜನೆ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೩೦೨೩ (೨೫೨೦) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮುಜರಾಯಿ ದೇವಾಲಯಗಳಲ್ಲಿ ಸಾಮೂಹಿಕ ವಿವಾಹ ಯೋಜನೆಯನ್ನು ಎಂದಿನಿಂದ ಜಾರಿಗೆ ತರಲಾಗಿದೆ ;

(ಆ) ಸದರಿ ಯೋಜನೆಯು ರೂಪು ರೇಷೆಗಳೇನು ; (ವಿವರಗಳನ್ನು ಒದಗಿಸುವುದು)

(ಇ) ಸದರಿ ಯೋಜನೆಯ ಯಾವ ಲೆಕ್ಕ ಶೀರ್ಷಿಕೆಯಡಿ, ಎಷ್ಟು ಮೊತ್ತವನ್ನು, ಎಲ್ಲಿಂದ ಭರಿಸಲಾಗುತ್ತಿದೆ ; (ವಿವರಗಳನ್ನು ಒದಗಿಸುವುದು)

(ಈ) ಸದರಿ ಯೋಜನೆಯನ್ನು ಸಾರ್ವಜನಿಕ ಹಿತದೃಷ್ಠಿಯಿಂದ ವಿಸ್ತರಿಸಲು ಕೈಗೊಂಡಿರುವ ಕ್ರಮಗಳೇನು ? (ವಿವರಗಳನ್ನು ಒದಗಿಸುವುದು)

## ಸರ್ಕಾರದಿಂದ ಸಿಬ್ಬಂದಿ ಮಾದರಿ ಕುರಿತು ಅನುಮೋದನೆ ಪಡೆಯುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೩೦೨೪ (೨೫೯೯) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗ್ರೂಪ್ 'ಎ' ಅಧಿಸೂಚಿತ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ದೇವಾಲಯದ ನೌಕರರ ಸಿಬ್ಬಂದಿ ಮಾದರಿ ಅನುಮೋದನೆಯನ್ನು ಪಡೆಯಲು ಸರ್ಕಾರದಲ್ಲಿ ಬಾಕಿಯಿರುವ ಪ್ರಸ್ತಾವನೆಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ದೇವಾಲಯದ ನೌಕರರು ನಿವೃತ್ತಿ ಅಂಚಿನಲ್ಲಿದ್ದು, ಈವರೆವಿಗೂ ಸಿಬ್ವಂದಿ ಮಾದರಿಯ ಅನುಮೋದನೆಯು ಆಡಳಿತಾತ್ಮಕ ವಿಚಾರವಾಗಿದ್ದು, ಸರ್ಕಾರದ ಹಂತದಲ್ಲಿಯೇ ಕ್ರಮ ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಸದರಿ ವಿಳಂಬಕ್ಕೆ ಕಾರಣಗಳೇನು ; (ವಿವರಗಳನ್ನು ನೀಡುವುದು)

(ಈ) ಯಾವ ಕಾಲಮಿತಿಯಲ್ಲಿ ಸದರಿ ಪ್ರಸ್ತಾವನೆಯನ್ನು ಅನುಮೋದಿಸಲಾಗುವುದು ?

## ತಸ್ತೀಕ್ ಪಟ್ಟಿಯಿಂದ ಬಿಟ್ಟುಹೋದ ದೇವಾಲಯಗಳ ಹಾಗೂ ಸಪ್ತಪದಿ ಯೋಜನೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೨೫ (೨೫೨೮) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ 'ಎ' ವರ್ಗ, 'ಬಿ' ವರ್ಗ, 'ಸಿ' ವರ್ಗ ದೇವಾಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಉಡುಪಿ ದ. ಜಿಲ್ಲೆಗಳ 'ಸಿ' ವರ್ಗದ ದೇವಾಲಯಗಳ ಸಂಖ್ಯೆ ಎಷ್ಟು ; ಅವುಗಳು ಯಾವುವು ; ಈ ದೇವಾಲಯಗಳಲ್ಲಿ ತಸ್ತೀಕ್ ಪಟ್ಟಿಯಿಂದ ಬಿಟ್ಟುಹೋದ ದೇವಲಯಗಳು ಯಾವುವು ; ತಸ್ತೀಕ್ ಪಟ್ಟಿಗೆ ಮರಸೇರ್ಪಡೆಗೆ ಬಂದ ಅರ್ಜಿಗಳ ಸಂಖ್ಯೆ ಎಷ್ಟು ; ಬಾಕಿಯಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಎಷ್ಟು ದೇವಾಲಯಗಳಲ್ಲಿ ಸಪ್ತಪದಿ ಕಾರ್ಯಕ್ರಮವನ್ನು ನಡೆಸಲಾಗಿದೆ ; ವೈವಾಹಿಕ ಜೀವನ ಪ್ರವೇಶಿಸಿದ ಜೋಡಿಗಳ ಸಂಖ್ಯೆ ಎಷ್ಟು ; ಪ್ರತಿ ಕಾರ್ಯಕ್ರಮಕ್ಕೆ ತಗಲುವ ಅಂದಾಜು ವೆಚ್ಚವೆಷ್ಟು ; 'ಎ' ವರ್ಗದ ದೇವಸ್ಥಾನದಲ್ಲಿ ನಿಗದಿತ ಅವಧಿ ಮತ್ತು ದಿನಗಳಲ್ಲಿ ಈ ಕಾರ್ಯಕ್ರಮ ಆಯೋಜನೆಗೆ ಸರ್ಕಾರದ ಕ್ರಮವೇನು ?

## ನಮೂನೆ ೫೦, ೫೩, ೫೭, ೯೪ಸಿ ಯಲ್ಲಿ ಸಲ್ಲಿಸಿದ ಅರ್ಜಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೨೬ (೨೫೨೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯ ಕುಂದಾಪುರ ಹಾಗೂ ಬ್ರಹ್ಮಾವರ ತಾಲ್ಲೂಕಿನಲ್ಲಿ ನಮೂನೆ ೫೦, ೫೩ ರಲ್ಲಿ ರೈತರಿಂದ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಸಮಿತಿಯಲ್ಲಿ ಮಂಜೂರಾತಿ ನೀಡಿದ ಅರ್ಜಿಗಳ ಸಂಖ್ಯೆ ಎಷ್ಟು ; ಸಮಿತಿಯಲ್ಲಿ ಮಂಜೂರಾತಿ ನೀಡಿ ಹಕ್ಕುಪತ್ರ ನೀಡದೇ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ; ವಿಚಾರಣೆಯ ಹಂತದಲ್ಲಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ತಿರಸ್ಕೃತವಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು)

(ಆ) ಕುಂದಾಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ೯೪ಸಿ ಮತ್ತು ೯೪ಸಿಸಿ ರಲ್ಲಿ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಮಂಜೂರಾತಿ ನೀಡಿದ ಅರ್ಜಿಗಳ ಸಂಖ್ಯೆ ಎಷ್ಟು ; ವಿಚಾರಣೆಯ ಹಂತದಲ್ಲಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ತಿರಸ್ಕೃತವಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಗ್ರಾಮವಾರು ಮಾಹಿತಿ ನೀಡುವುದು)

(ಇ) ಉಡುಪಿ ಜಿಲ್ಲೆಯ ಕುಂದಾಪುರ ಹಾಗೂ ಬ್ರಹ್ಮಾವರ ತಾಲ್ಲೂಕಿನಲ್ಲಿ ನಮೂನೆ ೫೭ರಲ್ಲಿ ಸಲ್ಲಿಸಿದ ಅರ್ಜಿಗಳ ಸಂಖ್ಯೆ ಎಷ್ಟು ; ಮಂಜೂರಾತಿಯಾದ ಅರ್ಜಿಗಳ ಸಂಖ್ಯೆ ಎಷ್ಟು ; ತಿರಸ್ಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ?

# ರಸ್ತೆಗಳ ಉನ್ನತೀಕರಣ ಮತ್ತು ಅಗಲೀಕರಣದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೨೭ (೨೫೨೭) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಯಾವ ಯಾವ ರಸ್ತೆಗಳ ಉನ್ನತೀಕರಣ ಮತ್ತು ಅಗಲೀಕರಣ ಕಾಮಗಾರಿಯನ್ನು ಕೈಗೊಳ್ಳಲಾಗಿರುತ್ತದೆ ; ಅವುಗಳ ಅಂದಾಜು ವೆಚ್ಚವೆಷ್ಟು ; ಸದರಿ ಕಾಮಗಾರಿಯು ಯಾವ ಹಂತದಲ್ಲಿದೆ ; (ವರ್ಷವಾರು ಮತ್ತು ಕಾಮಗಾರಿವಾರು ವಿವರ ನೀಡುವುದು ಹಾಗೂ ಈ ಕಾಮಗಾರಿಯ ಗುತ್ತಿಗೆದಾರರ ಹೆಸರು ಮತ್ತು ವಿಳಾಸವನ್ನು ಒದಗಿಸುವುದು)

(ಆ) ಲೋಕೋಪಯೋಗಿ ರಸ್ತೆಯ ಅಗಲೀಕರಣ ಸಂದರ್ಭದಲ್ಲಿ ರಸ್ತೆಯ ಪಕ್ಕದಲ್ಲಿ ಸ್ಥಳೀಯ ಗ್ರಾಮ ಪಂಚಾಯಿತಿಯಿಂದ ಅಳವಡಿಸಿದ ಕುಡಿಯುವ ನೀರಿನ ಪೈಪ್ ಲೈನ್‌ಗಳು ಹಾಳಾಗುವುದರಿಂದ ಕಾಮಗಾರಿಯ ಅಂದಾಜು ಪಟ್ಟಿಯಲ್ಲಿ ಪೈಪ್‌ಲೈನ್ ಅಳವಡಿಕೆಗೆ ಅವಕಾಶ ಕಲ್ಪಿಸಲಾಗುತ್ತದೆಯೇ ; ಇಲ್ಲವಾದಲ್ಲಿ, ಕಾರಣವೇನು ; ಅವಕಾಶ ಕಲ್ಪಿಸಿದ್ದಲ್ಲಿ ಜನರಿಗೆ ಅನುಕೂಲವಾಗುವುದಿಲ್ಲವೇ ;

(ಇ) ಉಡುಪಿ ಜಿಲ್ಲೆಯ ಕೋಟೇಶ್ವರ–ಸೋಮೇಶ್ವರ–ಶೃಂಗೇರಿ ರಸ್ತೆಯನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಕಾಲಮಿತಿಯಲ್ಲಿ ಮಾಡಲಾಗುವುದು ?

## ಕುಂದಾಪುರ–ಗಂಗೊಳ್ಳಿ ಸೇತುವೆ ರಚನೆ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೨೮ (೨೫೨೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಎಷ್ಟು ಕಿರು ಹಾಗೂ ಬೃಹತ್ ಸೇತುವೆಗಳು ಮಂಜೂರಾಗಿವೆ ಮತ್ತು ಎಷ್ಟು ಸೇತುವೆಗಳು ಪೂರ್ಣಗೊಂಡಿವೆ ; ಎಷ್ಟು ಪೂರ್ಣಗೊಳಿಸಲು ಬಾಕಿ ಇವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕುಂದಾಪುರ–ಗಂಗೊಳ್ಳಿ ಸೇತುವೆ ರಚನೆ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಸೇತುವೆಯ ಅಂದಾಜು ವೆಚ್ಚವೆಷ್ಟು; ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ;

(ಇ) ಪ್ರಸ್ತಾವನೆ ಇಲ್ಲದಿದ್ದಲ್ಲಿ, ೧೨ ಕಿ.ಮೀ.ಗೆ ಬದಲಾಗಿ ಕೇವಲ ೨ ಕಿ.ಮೀ. ನಲ್ಲಿ ಕ್ರಮಿಸಲು ಸಾಧ್ಯವಾಗಿಸುವ ಜನರ ಬಹುದಿನಗಳ ಬೇಡಿಕೆಯಾದ ಸೇತುವೆ ರಚನೆಯ ಬಗ್ಗೆ ಸರ್ಕಾರವು ಗಂಭೀರವಾಗಿ ಚಿಂತನೆ ನಡೆಸುವುದೇ ; ಇಲ್ಲವಾದಲ್ಲಿ ಕಾರಣವೇನು ?

## ಗುತ್ತಿಗೆ/ಪರವಾನಗಿ ಭೂಮಾಪಕರನ್ನು ವರ್ಗಾವಣೆ ಮಾಡುವ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೨೯ (೨೫೧೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಖಾಯಂ/ ಗುತ್ತಿಗೆ (ಪರವಾನಗಿ) ಭೂಮಾಪಕರು ಒಂದೇ ಸ್ಥಳದಲ್ಲಿ ಎಷ್ಟು ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ ; (ತಾಲ್ಲೂಕುವಾರು, ವರ್ಷವಾರು ಅವರ ಹೆಸರುಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು )

(ಆ) ಖಾಯಂ/ ಗುತ್ತಿಗೆ ಪರವಾನಗಿ ಭೂಮಾಪಕರು ಸರ್ವೆ ಮಾಡಲು ಹೋದಾಗ ಸರಿಯಾಗಿ ಸರ್ವೆ ಮಾಡದೇ ರೈತರಿಗೆ ತೊಂದರೆ ಮಾಡುತ್ತಿರುವುದಲ್ಲದೆ, ಅಲೆದಾಡಿಸುತ್ತಿರುವುದು ಮತ್ತು ಸುಳ್ಳು ಮಾಹಿತಿ ನೀಡುತ್ತಿರುವ ಸರ್ವೇಯರ್‌ಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ; (ಮಾಹಿತಿ ನೀಡುವುದು )

(ಇ) ಗುತ್ತಿಗೆ ಭೂಮಾಪಕರು ಹಲವಾರು ವರ್ಷಗಳಿಂದ ಒಂದೇ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು ಅವರನ್ನು ಬೇರೆಡೆಗೆ ವರ್ಗಾವಣೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? (ವಿವರ ನೀಡುವುದು)

## ಕಂದಾಯ ಇಲಾಖೆಯಿಂದ ಭೂರಹಿತರಿಗೆ ಭೂಮಿ ಮಂಜೂರು ಮಾಡುವ ಬಗ್ಗೆ

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೩೦ (೨೪೭೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂದಾಯ ಇಲಾಖೆಯಿಂದ ಭೂರಹಿತ ರೈತರಿಗೆ ಭೂಮಿ ಮಂಜೂರಾತಿ ನೀಡಲು ರೂಪಿಸಿರುವ ಯೋಜನೆಗಳಾವುವು; (ಅವುಗಳ ಸಂಪೂರ್ಣ ವಿವರ ನೀಡುವುದು)

(ಆ) ಬಗರ್ ಹುಕ್ಕುಂ ಯೋಜನೆ ಅಡಿಯಲ್ಲಿ ಅರ್ಜಿ ಸಲ್ಲಿಸಲು ಇರುವಂತಹ ಮಾನದಂಡಗಳೇನು ; ಅಗತ್ಯ ದಾಖಲೆಗಳಾವುವು ; (ಸಂಪೂರ್ಣ ವಿವರ ನೀಡುವುದು)

(ಇ) ವಿವಿಧ ಭೂ ಮಂಜೂರಾತಿ ಯೋಜನೆಗಳಡಿ ಚಿಕ್ಕಮಗಳೂರು ಜಿಲ್ಲೆಯ ಕಡೂರು ಮತ್ತು ತರೀಕೆರೆ ತಾಲ್ಲೂಕುಗಳಲ್ಲಿ ಹಾಗೂ ತುಮಕೂರು ಜಿಲ್ಲೆಯ ಗುಬ್ಬಿ-ತಿಪಟೂರು-ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ಕಳೆದ ಐದು ವರ್ಷಗಳಲ್ಲಿ ಮಂಜೂರಾದ ಭೂಮಿಯೆಷ್ಟು ? (ಫಲಾನುಭವಿಗಳ ವಿವರವನ್ನು ವಿಳಾಸದೊಂದಿಗೆ, ಸರ್ವೆ ನಂಬರ್‌ವಾರು, ಹೋಬಳಿವಾರು, ಯೋಜನೆವಾರು, ವಾರ್ಷಿಕವಾರು, ಪ್ರತಿ ಫಲಾನುಭವಿಗೆ ನೀಡಿದ ಜಮೀನಿನ ವಿವರವನ್ನು ಸಂಪೂರ್ಣವಾಗಿ ನೀಡುವುದು)

## ಬೆಂಗಳೂರಿನ ಕಬ್ಬನ್‌ಪಾರ್ಕ್‌ನಲ್ಲಿರುವ ಕೆ.ಎಫ್.ಡಿ.ಸಿ ಬಗ್ಗೆ

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೦೩೧ (೨೪೬೭) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ಕಬ್ಬನ್ ಪಾರ್ಕ್‌ನಲ್ಲಿರುವ ಕೆ.ಎಫ್.ಡಿ.ಸಿ ಘಟಕ ಮತ್ತು ಇದರ ವ್ಯಾಪ್ತಿಯಲ್ಲಿರುವ ಮೀನು ಮಾರಾಟ ಮಳಿಗೆಗಳು ಯಾವುವು; ೨೦೧೫-೧೬ ರಿಂದ ಇಲ್ಲಿಯವರೆಗೂ ಈ ಮಳಿಗೆಗಳಿಗೆ ಖರೀದಿ ಮಾಡುತ್ತಿರುವ ಮೀನಿನ ಪ್ರಮಾಣ ಎಷ್ಟು; ಯಾರಿಂದ ಖರೀದಿಸಲಾಗಿದೆ; ಖರೀದಿ ಮೌಲ್ಯ ಎಷ್ಟು; (ಮಾಹೆವಾರು ಹಾಗೂ ಮೀನು ಜಾತಿವಾರು ವಿವರ ಒದಗಿಸುವುದು)

(ಆ) ೨೦೧೫-೧೬ ರಿಂದ ಇಲ್ಲಿಯವರೆಗೂ ಈ ರೀತಿ ಖರೀದಿ ಮಾಡಿದ ಮೀನನ್ನು ಮಾರಾಟ ಮಾಡಿರುವ ಪ್ರಮಾಣ ಎಷ್ಟು; ಬಂದ ಆದಾಯ ಎಷ್ಟು ಹಾಗೂ ಉಳಿದ ಎಷ್ಟು ಪ್ರಮಾಣದ ಮೀನನ್ನು ಉಪಹಾರ ತಯಾರಿಕೆಗೆ ಬಳಸಿ ಮಾರಾಟ ಮಾಡಲಾಗಿದೆ ಹಾಗೂ ಇದರಿಂದ ಎಷ್ಟು ಆದಾಯ ಬಂದಿದೆಯೆ ; (ಮಾಹೆವಾರು ಹಾಗೂ ಮೀನು ಜಾತಿವಾರು ವಿವರ ಒದಗಿಸುವುದು)

(ಇ) ೨೦೧೫-೧೬ ರಿಂದ ಇಲ್ಲಿಯವರೆಗೂ ಖರೀದಿ ಮಾಡಿದ ಮೀನಿನಲ್ಲಿ ಎಷ್ಟು ಹಾಳಾಗಿವೆ ಹಾಗೂ ಇದರ ಮೌಲ್ಯ ಎಷ್ಟು; ಇದಕ್ಕೆ ಸರ್ಕಾರದಿಂದ ಸೂಕ್ತ ಮನ್ನಾ ಆದೇಶ ಪಡೆಯಲಾಗಿದೆಯೇ ; (ದಾಖಲೆಯೊಂದಿಗೆ ವಿವರ ಒದಗಿಸುವುದು)

(ಈ) ಸರ್ಕಾರದ ಎಲ್ಲಾ ಸೇವೆಗಳನ್ನು Online ಮಾಡಲಾಗಿದ್ದರೂ ಸಹ ಸರ್ಕಾರದ ಅಂಗ ಸಂಸ್ಥೆಯಾದ ಕೆ.ಎಫ್.ಡಿ.ಸಿ ಹೋಟೆಲ್‌ನಲ್ಲಿ ನಗದು ವ್ಯವಹಾರ ನಡೆಸುತ್ತಿದ್ದು, ಇದರಿಂದ ಸಾಕಷ್ಟು ಅವ್ಯವಹಾರ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಗ್ರಾಹಕರು Online ಪಾವತಿ ಮಾಡುವಂತೆ ಕ್ರಮಕೈಗೊಳ್ಳದಿರಲು ಕಾರಣಗಳೇನು ;

(ಉ) ಬೆಂಗಳೂರಿನ ಕೆ.ಎಫ್.ಡಿ.ಸಿ ಘಟಕದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ನೌಕರರು ಯಾರು ಇವರು ಎಷ್ಟು ವರ್ಷಗಳಿಂದ ಇದೇ ಘಟಕದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ; ಇವರುಗಳನ್ನು ಸರ್ಕಾರ ವರ್ಗಾವಣೆ ನಿಯಮದಂತೆ ಕಾಲಕಾಲಕ್ಕೆ ವರ್ಗಾವಣೆ ಮಾಡದಿರುವುದರಿಂದ ಅವ್ಯವಹಾರ ನಡೆಯುತ್ತಿದ್ದು, ಈ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## ರಾಜ್ಯದಲ್ಲಿ ಇರುವ ಪಿಂಚಣಿ ವ್ಯವಸ್ಥೆ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೩೨ (೨೪೬೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಾರಿಯಲ್ಲಿರುವ ಪಿಂಚಣಿ ವ್ಯವಸ್ಥೆಗಳಾದ ಓ.ಎ.ಪಿ, ಪಿ.ಹೆಚ್.ಪಿ, ಡಿ.ಡಬ್ಲ್ಯೂ.ಪಿ, ಎಸ್.ಎಸ್.ವೈ ಯೋಜನೆಗಳಲ್ಲಿ ನೀಡುವ ಪಿಂಚಣಿಯು ಸರಿಯಾದ ಸಮಯಕ್ಕೆ ಫಲಾನುಭವಿಗಳಿಗೆ ತಲುಪದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಆ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯದಲ್ಲಿ ಜನರು ಆರ್ಥಿಕ ಸಂಕಷ್ಟದಲ್ಲಿ ಇರುವುದರಿಂದ ಪ್ರಸ್ತುತ ನೀಡುತ್ತಿರುವ ಪಿಂಚಣಿಯನ್ನು ಹೆಚ್ಚು ಮಾಡುವ ಚಿಂತನೆ ಸರ್ಕಾರದ ಮುಂದಿದೆಯೇ; ಹಾಗಿದ್ದರೆ, ಯಾವ ಕಾಲಮಿತಿಯಲ್ಲಿ ಜಾರಿಗೆ ತರಲಾಗುವುದು ?

## ರಾಜ್ಯದಲ್ಲಿರುವ ರಾಷ್ಟ್ರೀಯ ಹೆದ್ದಾರಿಗಳ ಟೋಲ್ ಪ್ಲಾಜಗಳ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೩೩ (೨೪೬೬) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ರಾಷ್ಟ್ರೀಯ ಹೆದ್ದಾರಿಗಳಲ್ಲಿರುವ ಟೋಲ್ ಪ್ಲಾಜಗಳ ಸಂಖ್ಯೆ ಎಷ್ಟು; ಅವು ಯಾವುವು; ನಿರ್ಮಾಣವಾದ ವರ್ಷ

ಯಾವುದು; ಈ ಟೋಲ್‌ಗಳ ಟೆಂಡರ್‌ದಾರರು ಯಾರು; ಟೆಂಡರ್ ಅವಧಿ ಎಷ್ಟು ; (ಟೆಂಡರ್‌ದಾರರೊಂದಿಗೆ ಸರ್ಕಾರ ಮಾಡಿಕೊಂಡಿರುವ ಒಪ್ಪಂದದ ಪತ್ರದೊಂದಿಗೆ ವಿವರ ನೀಡುವುದು)

(ಆ) ಕಳೆದ ಐದು ವರ್ಷಗಳಲ್ಲಿ ಈ ಟೋಲ್‌ಗಳಲ್ಲಿ ಸಂಗ್ರಹವಾದ ಹಣವೆಷ್ಟು; ಇದರಲ್ಲಿ ಸರ್ಕಾರಕ್ಕೆ ಮತ್ತು ಟೆಂಡರ್‌ದಾರರಿಗೆ ಬಂದ ವರಮಾನವೆಷ್ಟು; ಕಳೆದ ಐದು ವರ್ಷಗಳಲ್ಲಿ ಇವುಗಳ ನಿರ್ವಹಣೆಗಾಗಿ ವೆಚ್ಚ ಮಾಡಲಾದ ಹಣ ಎಷ್ಟು ; (ಸೇವಾವಾರು ಮತ್ತು ಟೋಲ್‌ವಾರು ವಿವರ ನೀಡುವುದು)

(ಇ) ಸರ್ಕಾರದ ನಿಯಮಗಳಂತೆ ಈ ಟೋಲ್‌ಗಳಲ್ಲಿ ಪ್ರಯಾಣಿಕರಿಗೆ ಒದಗಿಸಬೇಕಾದ ಸೇವೆ/ಸೌಲಭ್ಯಗಳೇನು; ಈ ಸೇವೆಗಳಿಗಾಗಿ ಖರ್ಚಾಗಿರುವ ವೆಚ್ಚವೆಷ್ಟು ; (ಆದೇಶಗಳ ಸಹಿತ ವಿವರವಾದ ಮಾಹಿತಿ ನೀಡುವುದು)

(ಈ) ಈ ಟೋಲ್‌ಗಳಲ್ಲಿ ಪ್ರಯಾಣಿಕರು ಕಾಯಲು ಸರ್ಕಾರ ನಿಗದಿಪಡಿಸಿರುವ ಕಾಲಮಿತಿಯೆಷ್ಟು; ಈ ಕಾಲಮಿತಿ ದಾಟಿದ ನಂತರ ಟೋಲ್ ವಸೂಲಿ ಮಾಡಲು ಅವಕಾಶವಿದೆಯೇ; ಫಾಸ್ಟ್ ಟ್ಯಾಗ್ ಸೆನ್ಸಾರ್‌ಗಳು ಸರಿಯಾಗಿ ಕೆಲಸ ಮಾಡದಿರುವುದರಿಂದ ಪ್ರಯಾಣಿಕರಿಗೆ ಆಗುತ್ತಿರುವ ತೊಂದರೆಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಅಂಬುಲೆನ್ಸ್ ಹಾಗೂ ಶಾಸಕರ ವಾಹನಗಳ ಸಂಚಾರಕ್ಕೆ ಪ್ರತ್ಯೇಕ ಲೇನ್ ಬಿಡದಿರುವುದು ಮತ್ತು ಅಧಿಕೃತ ಪಾಸ್ ಇದ್ದರೂ ಕೂಡ ಫಾಸ್ಟ್ ಟ್ಯಾಗ್ ಇಲ್ಲವೆಂಬ ಒಂದೇ ಕಾರಣಕ್ಕೆ ಟೋಲ್‌ಗಳಲ್ಲಿ ಶಾಸಕರ (ವಿ.ಐ.ಪಿ) ವಾಹನಗಳನ್ನು ಬಿಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸರ್ಕಾರಿ ಜಾಗವನ್ನು ಒತ್ತುವರಿ ಮಾಡಿದ ಕುರಿತ

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೩೪ (೨೪೬೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆ ಬೆಂಗಳೂರು ದಕ್ಷಿಣ ತಾಲ್ಲೂಕಿನ ಬೇಗೂರು ಹೋಬಳಿಯ ಹುಳಿಮಾವು ಗ್ರಾಮದ ಸರ್ವೆ ನಂ ೬೩ ರಲ್ಲಿ ೫ ಎಕರೆ ಸ್ಥಳವನ್ನು ಇಸ್ಲಾಮಿಯಾ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ ಕಾಲೇಜು ಶಿಕ್ಷಣ ಸಂಸ್ಥೆಯವರು ಅಕ್ರಮವಾಗಿ ಒತ್ತುವರಿ ಮಾಡಿದ ಜಾಗದಲ್ಲಿ ಕಟ್ಟಡ ಕಟ್ಟಲು ಆರಂಭಿಸಿದ ದಿನದಿಂದ ಸದರಿ ಕಟ್ಟಡ ಕಾಮಗಾರಿ ಪೂರ್ಣಗೊಂಡ ದಿನಾಂಕದವರೆಗೆ ಸದರಿ ಸ್ಥಳದ ಅಧಿಕಾರ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸಿದ ತಹಶಿಲ್ದಾರ್, ಎಸಿ ಮತ್ತು ಡಿಸಿ ಗಳು ಕರ್ತವ್ಯ ನಿರ್ವಹಿಸಿದ ಅವಧಿಯೊಂದಿಗೆ ಮಾಹಿತಿ ನೀಡಿ ;

(ಆ) ಸದರಿ ಅಕ್ರಮವಾಗಿ ಒತ್ತುವರಿ ಮಾಡಿದ ಜಾಗವನ್ನು ತೆರವುಗೊಳಿಸಲು ಯಾವುದೇ ಪ್ರಯತ್ನ ಪಡದೆ ಸದರಿ ಸ್ಥಳವನ್ನು ಅಕ್ರಮವಾಗಿ ಒತ್ತುವರಿ ಮಾಡಿದ ಸಂಸ್ಥೆಯವರು ಅನುಭವಿಸಿಕೊಂಡು ಬರುತ್ತಿದ್ದಾರೆ ಈ ಬಗ್ಗೆ ಸರ್ಕಾರಕ್ಕೆ ವರದಿ ನೀಡಿದ ಎಸಿ ಯವರ ವಿರುದ್ಧ ಯಾವ ಶಿಸ್ತು ಕ್ರಮ ಕೈಗೊಳ್ಳಲಾಗಿದೆ; ಅಕ್ರಮಕ್ಕೆ ಸಹಕರಿಸಿದ ಆಧಾರದಲ್ಲಿ ಇವರ ಮೇಲೆ ಕ್ರಿಮಿನಲ್ ಕೇಸು ದಾಖಲು ಮಾಡದಿರಲು ಕಾರಣವೇನು ;

(ಇ) ಕೋಟ್ಯಾಂತರ ರೂ ಬೆಲೆಬಾಳುವ ಸರ್ಕಾರಿ ಸ್ಥಳವನ್ನು ಅಕ್ರಮವಾಗಿ ಒತ್ತುವರಿ ಮಾಡಿ ಕಟ್ಟಡ ನಿರ್ಮಿಸಲು ಸಹಕರಿಸಿದ ತಹಶಿಲ್ದಾರ್

ಎಸಿ ಮತ್ತು ಡಿಸಿ ಗಳ ಆಸ್ತಿಗಳನ್ನು ವಶಪಡಿಸಿಕೊಂಡು ಸರ್ಕಾರಕ್ಕಾದ ಎಲ್ಲಾ ನಷ್ಟವನ್ನು ವಸೂಲಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು; ಸದರಿ ಅಧಿಕಾರಿಗಳ ಆಸ್ತಿಯನ್ನು ಯಾವಾಗ ವಶಪಡಿಸಿಕೊಳ್ಳಲಾಗುವುದು ?

## ಓ.ಬಿ.ಸಿ ಹಾಸ್ಟೆಲ್‌ಗಳ ಅಡುಗೆ ಕೆಲಸಗಾರರು ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೩೫ (೨೪೬೨) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಡುಗೆ ಕೆಲಸಗಾರರು ಮತ್ತು ಅಡುಗೆ ಸಹಾಯಕರುಗಳ ಸಂಖ್ಯೆ ಎಷ್ಟು; ಇದರಲ್ಲಿ ಗುತ್ತಿಗೆ, ಹೊರಗುತ್ತಿಗೆ ನೌಕರರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅಡುಗೆ ಕೆಲಸಗಾರರು ಮತ್ತು ಅಡುಗೆ ಸಹಾಯಕರುಗಳಿಗೆ ನೀಡುವ ವೇತನವೆಷ್ಟು; ಗುತ್ತಿಗೆ, ಹೊರಗುತ್ತಿಗೆ ನೌಕರರಿಗೆ ನಿಗದಿಪಡಿಸಿದ ವೇತನ ಎಷ್ಟು ;

(ಇ) ಸದರಿಯವರುಗಳಿಗೆ ವಾರದ ರಜೆ ನೀಡಲಾಗುತ್ತದೆಯೇ ; ಹೌದ್ದಲ್ಲಿ, ತಿಂಗಳಿಗೆ ಎಷ್ಟು ರಜೆಗಳನ್ನು ನೀಡಲಾಗುತ್ತದೆ ; ಹಬ್ಬದ ದಿನಗಳಲ್ಲಿ ರಜೆ ನೀಡಲಾಗುತ್ತದೆಯೇ ;

(ಈ) ಸದರಿಯವರಿಗೆ ವಾರದ ರಜೆ ನೀಡಲು ಸಾಧ್ಯವಾಗದಿದ್ದಲ್ಲಿ ಪೊಲೀಸ್ ಇಲಾಖೆಯಲ್ಲಿ ನೀಡುವಂತೆ ವರ್ಷಕ್ಕೊಂದು ಬಾರಿ ಒಂದು ತಿಂಗಳ ವೇತನ ನೀಡುವ ಕುರಿತು ಸರ್ಕಾರದ ನಿಲುವೇನು; ಎಂದಿನಿಂದ ಈ ಕ್ರಮ ಜಾರಿಗೆ ಬರುತ್ತದೆ ?

## ತುಮಕೂರು ತಾಲ್ಲೂಕು ಕೋರ ಹೊಸಹಳ್ಳಿ ಸರ್ವೆ ನಂ. ೭೯/೧ ಬಗ್ಗೆ

**ಶ್ರೀ ಪಿ. ರಮೇಶ್ (ನಾಮನಿರ್ದೇಶನ ಹೊಂದಿದವರು) :-**

೩೦೩೬ (೨೫೦೪+೨೪೯೬+೨೪೭೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ತಾಲ್ಲೂಕು ಕೋರ ಹೊಸಹಳ್ಳಿ ಸರ್ವೆ ನಂ. ೭೯/೧ ಜಮೀನಿನ ಅಳತೆ ಮಾಡಲು ಪಹಣಿಯಲ್ಲಿ ೩-೯ ಕಾಲಂ ಸರಿಪಡಿಸುವ ಬಗ್ಗೆ ತುಮಕೂರು ಉಪ ವಿಭಾಗ ಅಧಿಕಾರಿಗಳ ನ್ಯಾಯಾಲಯದ ಆದೇಶವಾಗಿದ್ದು, ಸದರಿ ಆದೇಶದ ಮೇರೆಗೆ ಇದುವರೆವಿಗೂ ಯಾವುದೇ ಕ್ರಮ ಕೈಗೊಂಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ;

(ಇ) ತಾಲ್ಲೂಕು ಸರ್ವೆಯವರಿಂದ ಸರ್ವೆ ನಕ್ಷೆ ಮತ್ತು ವರದಿ ಪಡೆದು ಖಾತೆದಾರರ ಹೇಳಿಕೆ ಪಡೆದು ಪಹಣಿಯ ೩ ಮತ್ತು ೯ ಖರಾಬು ಕಡಿಮೆ ಮಾಡಿ ಪಹಣಿಯಲ್ಲಿ ಕಾಲಂ ೩ ಮತ್ತು ೯ಕ್ಕೆ ತಾಳೆ ಮಾಡಲು ತಹಶೀಲ್ದಾರರವರು ನಿರ್ದೇಶಿಸಿದ್ದರೂ ಸಹ ಬಹಳ ವರ್ಷಗಳಿಂದ ಜಮೀನಿನ ಅಕ್ಕಪಕ್ಕದಲ್ಲಿ ಜನ ಸಾಮಾನ್ಯರು ಓಡಾಡಲು ದಾರಿಯಿಲ್ಲದೆ ತುಂಬ ತೊಂದರೆಯಾಗಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ ; (ವಿವರ ನೀಡುವುದು)

(ಈ) ಸದರಿ ಸರ್ವೆ ಕೆಲಸವನ್ನು ಯಾವ ಕಾಲಮಿತಿಯೊಳಗೆ ಸರಿಪಡಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದ ಮುಜರಾಯಿ ದೇವಾಲಯಗಳ ಆಸ್ತಿಯನ್ನು ಸಂರಕ್ಷಿಸುವ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೩೭ (೨೪೯೪) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಮುಜರಾಯಿ "ಎ" ಗುಂಪಿನ ದೇವಾಲಯಗಳ ಒಟ್ಟು ಸಂಖ್ಯೆ ಹಾಗೂ ಇವುಗಳ ಸ್ಥಿರಾಸ್ತಿ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ರಾಜ್ಯದ ಮುಜರಾಯಿ ದೇವಾಲಯಗಳಿಗೆ ಸಂಬಂಧಿಸಿದ ಜಮೀನುಗಳು ಒತ್ತುವರಿಯಾಗಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ಈ ಒತ್ತುವರಿಯಾಗಿರುವ ಜಮೀನುಗಳನ್ನು ತೆರವುಗೊಳಿಸಲು ಸರ್ಕಾರದ ಕ್ರಮಗಳೇನು ? (ಮಾಹಿತಿ ನೀಡುವುದು)

## ಕಲಬುರಗಿ ಜಿಲ್ಲೆಯ ಪಶು ಚಿಕಿತ್ಸಾಲಯಗಳಲ್ಲಿ ವೈದ್ಯರ ಕೊರತೆ ಇರುವ ಬಗ್ಗೆ

**ಶ್ರೀ ಸುನೀಲ್ ವಲ್ಯಾಪುರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೩೮ (೨೪೯೮) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿರುವ ಪಶು ಚಿಕಿತ್ಸಾಲಯಗಳ ಸಂಖ್ಯೆ ಎಷ್ಟು;

(ಆ) ಅವುಗಳಲ್ಲಿ ವೈದ್ಯರ ಕೊರತೆ ಇರುವ ಚಿಕಿತ್ಸಾಲಯಗಳ ಸಂಖ್ಯೆ ಎಷ್ಟು ; (ಮಾಹಿತಿ ಒದಗಿಸುವುದು)

(ಇ) ಈ ಪಶು ವೈದ್ಯರನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ಕೈಗೊಂಡ ಕ್ರಮವೇನು ; ಮತ್ತು ಯಾವಾಗ ನೇಮಕ ಮಾಡಿಕೊಳ್ಳಲಾಗುವುದು ?

## ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯ ವಸತಿ ಯೋಜನೆಯ ಕುರಿತು

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೩೯ (೨೫೦೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಿಗೆ ವಿವಿಧ ವಸತಿ ಯೋಜನೆಯಡಿ ಮಂಜೂರಾದ ಮನೆಗಳ ಸಂಖ್ಯೆ ಎಷ್ಟು; (ಯೋಜನೆವಾರು ಮತ್ತು ಗ್ರಾಮ ಪಂಚಾಯತ್‌ವಾರು ಮಾಹಿತಿ ನೀಡುವುದು)

(ಆ) ಮಂಜೂರಾದ ಮನೆಗಳಲ್ಲಿ ಪೂರ್ಣವಾದ ಮತ್ತು ಅಪೂರ್ಣವಾಗಿರುವ ಮನೆಗಳ ಸಂಖ್ಯೆ ಎಷ್ಟು; (ಯೋಜನೆವಾರು ಮತ್ತು ಗ್ರಾಮ ಪಂಚಾಯತ್‌ವಾರು ಮಾಹಿತಿ ನೀಡುವುದು)

(ಇ) ಸದರಿ ಮನೆಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು ಹಾಗೂ ಬಾಕಿ ಇರುವ ಅನುದಾನ ಎಷ್ಟು; (ಗ್ರಾಮ ಪಂಚಾಯತ್‌ವಾರು ಮಾಹಿತಿ ನೀಡುವುದು)

(ಈ) ಸದರಿ ಮನೆಗಳಿಗೆ ಅನುದಾನದ ಕೊರತೆ ಇದೆಯೇ ;

(ಉ) ಬಡ ಜನರು ಹಲವಾರು ಕಾರಣಗಳಿಂದ ಮಂಜೂರಾದ ಮನೆಗಳನ್ನು ಕಟ್ಟಿಕೊಳ್ಳಲಾಗದೆ ; ಬ್ಲಾಕ್ ಅಥವಾ ಲ್ಯಾಪ್ಸ ಆಗುವುದರೊಂದಿಗೆ ವಂಚಿತರಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮವೇನು ;

(ಊ) ಬ್ಲಾಕ್ ಆಗಿರುವ ಮನೆಗಳನ್ನು ಕಟ್ಟಿಕೊಳ್ಳಲು ಜನರಿಗೆ ಮತ್ತೊಮ್ಮೆ ಅವಕಾಶ ಕೊಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ; ಈ ಬಗ್ಗೆ ಸರ್ಕಾರದ ನಿಲುವೇನು ?

## ವಿಜಯಪುರದಲ್ಲಿ ಜಿಲ್ಲಾ ಕಾರ್ಯಾಲಯಗಳ ಸಂಕೀರ್ಣ ನಿರ್ಮಾಣ ಮಾಡುವ ಕುರಿತು

**ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೪೦ (೨೫೦೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ನಗರ ಪ್ರದೇಶದ ಮಹಲಬಾಗಾಯತ್ ರಿ.ಸ.ನಂ.೩೧೩ ಮತ್ತು ೩೧೪ರಲ್ಲಿ ಜಿಲ್ಲಾ ಕಾರ್ಯಾಲಯಗಳ ಸಂಕೀರ್ಣವನ್ನು ನಿರ್ಮಾಣ ಮಾಡುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಕಾಮಗಾರಿಗೆ ಅನುದಾನದ ಕೊರತೆ ಇದೆಯೇ ; ಇಲ್ಲಿಯವರೆಗೆ ಬಿಡುಗಡೆಯಾದ ಹಾಗೂ ಖರ್ಚಾದ ಅನುದಾನ ಎಷ್ಟು ; (ವಿವರಗಳನ್ನು ನೀಡುವುದು)

(ಇ) ಸದರಿ ಕಾಮಗಾರಿಯ ಬಗ್ಗೆ ಸರ್ಕಾರ ಆಸಕ್ತಿ ವಹಿಸದಿರಲು ಕಾರಣವೇನು ;

(ಈ) ಪ್ರಸ್ತುತ ಕಾಮಗಾರಿಯು ಯಾವ ಹಂತದಲ್ಲಿದೆ ? (ವಿವರಗಳನ್ನು ನೀಡುವುದು)

## ಜಸ್ಟಿಸ್ ಜಿ.ರೋಹಿಣಿಯವರ ನೇತೃತ್ವದಲ್ಲಿ ಆಯೋಗ ರಚನೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೩೦೪೧ (೨೫೧೪) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರವು ಜಸ್ಟಿಸ್ ಜಿ.ರೋಹಿಣಿಯವರ ನೇತೃತ್ವದಲ್ಲಿ ಇತರೆ ಹಿಂದುಳಿದ ವರ್ಗಗಳಲ್ಲಿ ಒಳ ಮೀಸಲಾತಿಯನ್ನು ಗುರುತಿಸಿ, ಶಿಫಾರಸ್ಸು ಮಾಡಲು ಆಯೋಗವನ್ನು ರಚಿಸಿರುವುದು ರಾಜ್ಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಆಯೋಗವು ಸರ್ಕಾರದಿಂದ ರಾಜ್ಯದಲ್ಲಿನ ಹಿಂದುಳಿದ ವರ್ಗಗಳ ಬಗ್ಗೆ ಕೋರಿರುವ ಅಂಕಿ–ಅಂಶ, ಆಯೋಗದ ವರದಿಗಳು ಮತ್ತು ಕಾರ್ಯಕ್ರಮಗಳ ಬಗ್ಗೆ ಹಾಗೂ ಸರ್ಕಾರದಿಂದ ಒದಗಿಸಿರುವ ಮಾಹಿತಿಗಳ ಬಗ್ಗೆ ಪೂರ್ಣ ಮಾಹಿತಿ ನೀಡುವುದು ;

(ಇ) ಈ ಆಯೋಗವು ರಾಜ್ಯಕ್ಕೆ ಭೇಟಿ ನೀಡಿ, ಹಿಂದುಳಿದ ಸಮುದಾಯದ ಮುಖಂಡರಿಂದ, ಸಂಘ–ಸಂಸ್ಥೆಗಳಿಂದ, ರಾಜ್ಯ ಸರ್ಕಾರದ ಪ್ರತಿನಿಧಿಗಳಿಂದ ಹಾಗೂ ಇತರೆ ಹಿತಾಸಕ್ತಿಯುಳ್ಳವರಿಂದ ಅಭಿಪ್ರಾಯ, ಸಲಹೆ–ಸೂಚನೆ ಪಡೆದಿದೆಯೇ ? (ಸಂಪೂರ್ಣ ವಿವರ ನೀಡುವುದು)

## ಹಾಲು ಮತ್ತು ಹಾಲು ಉತ್ಪನ್ನಗಳ ಬೇಡಿಕೆ ಬಗ್ಗೆ ಸಮೀಕ್ಷೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೩೦೪೨ (೨೫೧೫) ಮಾನ್ಯ ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಮತ್ತು ಮುಂಬರುವ ದಿನಗಳಲ್ಲಿ ಹಾಲು ಮತ್ತು ಹಾಲು ಉತ್ಪನ್ನಗಳ ಬೇಡಿಕೆ ಬಗ್ಗೆ ಸರ್ಕಾರ ಸಮೀಕ್ಷೆ ನಡೆಸಿದೆಯೇ ; (ಸಮೀಕ್ಷೆ ವಿವರ ನೀಡುವುದು)

(ಆ) ೨೦೨೫ಕ್ಕೆ ಕೇಂದ್ರ ಸರ್ಕಾರ ರಾಜ್ಯ ಸರ್ಕಾರಕ್ಕೆ ನಿಗದಿಪಡಿಸಿರುವ ಗುರಿಗಳು ಯಾವುವು ; ಈ ಗುರಿಗಳನ್ನು ಸಾಧಿಸಲು ರಾಜ್ಯ ಸರ್ಕಾರ ಕೈಗೊಂಡಿರುವ ಯೋಜನೆಗಳು ಮತ್ತು ಕಾರ್ಯಕ್ರಮಗಳು ಯಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ವಿಶ್ವಬ್ಯಾಂಕ್ ಮತ್ತು ಇತರೆ ಬಾಹ್ಯ ನೆರವು ಯೋಜನೆ ಅಡಿಯಲ್ಲಿ ಡೈರಿ ವಲಯದಲ್ಲಿ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಮತ್ತು ಕಾರ್ಯಕ್ರಮಗಳು ಯಾವುವು ? (ಸಂಪೂರ್ಣ ವಿವರ ನೀಡುವುದು)

## ರಾಷ್ಟ್ರೀಯ ಸಾಗರ ಮತ್ಸ್ಯ ನೀತಿ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೩೦೪೩ (೨೫೧೩) ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದ ರಾಷ್ಟ್ರೀಯ ಸಾಗರ ಮತ್ಸ್ಯ ನೀತಿಯಂತೆ ಸ್ಥಳೀಯ ಮೀನು–ಕೃಷಿಕರು ಮತ್ತು ಅವುಗಳ ಸಂಘ–ಸಂಸ್ಥೆಗಳನ್ನೊಳಗೊಂಡಂತೆ ಸಾಗರದಲ್ಲಿನ ಮತ್ಸ್ಯ ಸಂಪತ್ತನ್ನು ವ್ಯವಸ್ಥಿತ ರೀತಿಯಲ್ಲಿ ಕಾಪಾಡಲು ರಾಜ್ಯ ಸರ್ಕಾರ ರೂಪಿಸಿರುವ ಕಾರ್ಯಕ್ರಮ ಮತ್ತು ಯೋಜನೆಗಳು ಯಾವುವು ;

(ಆ) ಈ ಕಾರ್ಯಕ್ರಮ ಮತ್ತು ಯೋಜನೆಗಳ ಅನುಷ್ಠಾನಕ್ಕೆ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ದೊರೆತಿರುವ ಅನುದಾನವೆಷ್ಟು ಮತ್ತು

ರಾಜ್ಯ ಸರ್ಕಾರ ಪೂರಕವಾಗಿ ನೀಡಿರುವ ಅನುದಾನವೆಷ್ಟು; (ಕಳೆದ ೩ ವರ್ಷಗಳ ಜಿಲ್ಲಾವಾರು, ಯೋಜನೆವಾರು ಮತ್ತು ವರ್ಷಾವಾರು ಮಾಹಿತಿಯನ್ನು ನೀಡುವುದು)

(ಇ) ರಾಜ್ಯದಲ್ಲಿ ಸಾಗರ ಮತ್ಸ್ಯವನ್ನು ಸಂರಕ್ಷಿಸಲು ಮತ್ತು ವಿವಿಧ ಯೋಜನೆಗಳನ್ನು ನಿರ್ವಹಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಗುರುತಿಸಿರುವ ಇಲಾಖೆಗಳು ಮತ್ತು ಸಂಸ್ಥೆಗಳು ಯಾವುವು ? (ವಿವರ ನೀಡುವುದು)

## ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ವಸತಿ ಗೃಹಗಳ ಹಂಚಿಕೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೩೦೪೪ (೨೫೧೨) ಮಾನ್ಯ ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಪ್ರಧಾನ ಮಂತ್ರಿ ಆವಾಸ್ ಯೋಜನೆಯು ಜಾರಿಯಾದ ದಿನದಿಂದ ಈವರೆಗೆ ಈ ಯೋಜನೆಯಡಿ ವಿವಿಧ ವರ್ಗಗಳ ವಸತಿಹೀನರಿಗೆ ನಗರ, ಪಟ್ಟಣ ಮತ್ತು ಘೋಷಿತ ಯೋಜನಾ ಪ್ರಾಧಿಕಾರಗಳಲ್ಲಿ ಮಂಜೂರು ಮಾಡಿರುವ ವಸತಿ ಗೃಹಗಳೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಯೋಜನೆ ಅಡಿಯಲ್ಲಿ ಮಂಜೂರು ಮಾಡಿರುವ ವಸತಿ ಗೃಹಗಳ ನಿರ್ಮಾಣ ಯಾವ ಹಂತದಲ್ಲಿವೆ ; (ಸಂಪೂರ್ಣ ಜಿಲ್ಲಾವಾರು ವಿವರ ನೀಡುವುದು)

(ಇ) ನಗರ ಮತ್ತು ಪಟ್ಟಣ ಪ್ರದೇಶಗಳಲ್ಲಿ ವಸತಿ ಗೃಹಗಳಿಗೆ ಹೆಚ್ಚಿನ ಬೇಡಿಕೆ ಇದ್ದು, ಈ ಬೇಡಿಕೆಯನ್ನು ಪೂರೈಸಲು ಸಮೀಕ್ಷೆ ನಡೆಸಿ ರೂಪಿಸಿರುವ ಕಾರ್ಯ ಯೋಜನೆಗಳು ಯಾವುವು ? (ಪೂರ್ಣ ವಿವರ ನೀಡುವುದು)

# PRASAD (Pilgrimage Rejuvenation and Spiritual, Heritage) ಬೆಂಗಳೂರು Augmentation ಯೋಜನೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೩೦೪೫ (೨೫೧೬) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೇಂದ್ರ ಸರ್ಕಾರದ ಪ್ರವಾಸೋದ್ಯಮ ಮಂತ್ರಾಲಯದಿಂದ ರೂಪಿತವಾಗಿರುವ ಪ್ರಸಾದ – PRASAD (Pilgrimage Rejuvenation and Spiritual, Heritage) Augmentation ಯೋಜನೆಯಡಿ ತೀರ್ಥಸ್ಥಳಗಳನ್ನು ಮತ್ತು ಪಾರಂಪರಿಕೆ ಸ್ಥಳಗಳಲ್ಲಿ ಯಾತ್ರೆಗಳಿಗೆ ಅಗತ್ಯವಿರುವ ಮೂಲಸೌಕರ್ಯಗಳನ್ನು ಕಲ್ಪಿಸಲು ರಾಜ್ಯ ಸರ್ಕಾರದಿಂದ ಪ್ರವಾಸೋದ್ಯಮ ಇಲಾಖೆ ಮುಖೇನ ಕೇಂದ್ರ ಸರ್ಕಾರದ ಆರ್ಥಿಕ ನೆರವು ಪಡೆಯಲು ಪ್ರಸ್ತಾವನೆಗಳನ್ನು ಸಲ್ಲಿಸಲಾಗಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯ ಸರ್ಕಾರ ಕಳುಹಿಸಿರುವ ಪ್ರಸ್ತಾವನೆಗಳಲ್ಲಿ ಕೇಂದ್ರದಿಂದ ಮಂಜೂರಾಗಿರುವ ಪ್ರಸ್ತಾವನೆಗಳೆಷ್ಟು ಮತ್ತು ಒದಗಿಸಿರುವ ಆರ್ಥಿಕ ನೆರವೆಷ್ಟು ;

(ಇ) ಈ ಯೋಜನೆ ಅಡಿ ನಿಗಧಿಪಡಿಸಿರುವ ಭೌತಿಕ-ಆರ್ಥಿಕ ಗುರಿ, ಪ್ರಗತಿ ಹಾಗೂ ಸಾಧನೆಗಳ ವಿವರಗಳೇನು ? (ಪೂರ್ಣ ಮಾಹಿತಿ ನೀಡುವುದು)

## ಕೊಡಗು ಜಿಲ್ಲೆಯಲ್ಲಿನ ಪೊನ್ನಂಪೇಟೆ ಮತ್ತು ಕುಶಾಲನಗರ ಹೊಸ ತಾಲ್ಲೂಕುಗಳ ಕಾರ್ಯಾರಂಭ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೦೪೬ (೨೫೦೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿ, ಹೊಸದಾಗಿ ಸೃಷ್ಟಿಸಿದ ಪೊನ್ನಂಪೇಟೆ ಮತ್ತು ಕುಶಾಲನಗರ ತಾಲ್ಲೂಕುಗಳು ಅಧಿಕೃತವಾಗಿ ಕಾರ್ಯಾರಂಭವಾಗಿದೆಯೇ ;

(ಆ) ಕಾರ್ಯಾರಂಭ ಮಾಡಿದ್ದಲ್ಲಿ, ಸದರಿ ತಾಲ್ಲೂಕುಗಳಿಗೆ ಅಗತ್ಯ ಕಛೇರಿಗಳು, ಸಿಬ್ಬಂದಿಗಳು ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ಅತ್ಯವಶ್ಯವಿರುವ ಇತರೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆಯೇ ; (ವಿವರ ನೀಡುವುದು)

(ಇ) ಮೂಲಭೂತ ಸೌಕರ್ಯಗಳನ್ನು ಇದುವರೆಗೂ ಕಲ್ಪಿಸದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಅವುಗಳನ್ನು ಕಲ್ಪಿಸಲಾಗುವುದು?

## ಕೊಡಗು ಜಿಲ್ಲೆಯಲ್ಲಿ ನಮೂನೆ 'ಎ' ರಲ್ಲಿ ಅರ್ಜಿ ಸಲ್ಲಿಸಿರುವ ಅರಣ್ಯವಾಸಿಗಳಿಗೆ ಬೇಸಾಯಕ್ಕಾಗಿ ಭೂಮಿ ಹಕ್ಕು ಪತ್ರ ನೀಡುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೦೪೭ (೨೫೦೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿ, ಅನುಸೂಚಿತ ಬುಡಕಟ್ಟುಗಳು ಮತ್ತು ಇತರೆ ಪಾರಂಪರಿಕ ಅರಣ್ಯವಾಸಿಗಳು ಅರಣ್ಯ ಹಕ್ಕಿಗಾಗಿ ನಮೂನೆ 'ಎ' ರಲ್ಲಿ ಅರ್ಜಿ ಸಲ್ಲಿಸಿರುವವರಿಗೆ ಇದುವರೆಗೂ ಬೇಸಾಯಕ್ಕಾಗಿ ಭೂಮಿ ಗುರುತಿಸಿ ಹಕ್ಕು ಪತ್ರ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದುವರೆಗೂ ಈ ಅರಣ್ಯವಾಸಿಗಳಿಗೆ ಹಕ್ಕುಪತ್ರ ನೀಡದಿರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ ಸದರಿ ಅರಣ್ಯವಾಸಿಗಳಿಗೆ ಬೇಸಾಯಕ್ಕಾಗಿ ಭೂಮಿ ಗುರುತಿಸಿ ಹಕ್ಕುಪತ್ರ ನೀಡಲಾಗುವುದು ?

## ಮುಜರಾಯಿ ಇಲಾಖೆಗೆ ಬಿಡುಗಡೆಯಾಗಿರುವ ಅನುದಾನದ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೩೦೪೮ (೨೪೭೪) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ಸಾಲಿನಲ್ಲಿ ಮುಜರಾಯಿ ಇಲಾಖೆಗೆ ನೀಡಲಾದ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನವೆಷ್ಟು ;

(ಆ) ಪ್ರಸಕ್ತ ಸಾಲಿನಲ್ಲಿ ಮುಜರಾಯಿ ಇಲಾಖೆಯ ವ್ಯಾಪ್ತಿಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ? (ವಿವರವನ್ನು ನೀಡುವುದು)

## ಸಪ್ತಪದಿ ಸಾಮೂಹಿಕ ವಿವಾಹ ಯೋಜನೆಯ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೩೦೪೯ (೨೪೭೬) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ಸಾಲಿನಲ್ಲಿ ಸಪ್ತಪದಿ ಸಾಮೂಹಿಕ ವಿವಾಹ ಯೋಜನೆಯನ್ನು ಯಾವ ಯಾವ ದೇವಾಲಯಗಳಲ್ಲಿ ಜಾರಿಗೊಳಿಸಲಾಗಿದೆ ; ಈ ಯೋಜನೆಗೆ ನೀಡಲಾಗಿರುವ ಅನುದಾನವೆಷ್ಟು ; (ವಿವರವನ್ನು ನೀಡುವುದು)

(ಆ) ಈ ಯೋಜನೆಯಡಿಯಲ್ಲಿ ವಧು ವರರಿಗೆ ನೀಡಲಾಗಿರುವ ವಸ್ತುಗಳು ಯಾವುವು ; ಅವುಗಳ ಮೌಲ್ಯವೆಷ್ಟು ;

(ಇ) ಈವರೆಗೆ ಈ ಯೋಜನೆಯ ಪ್ರಯೋಜನವನ್ನು ಪಡೆದ ವಧು-ವರರ ಸಂಖ್ಯೆ ಎಷ್ಟು ? (ವಿವರವನ್ನು ನೀಡುವುದು)

## ಸರ್ಕಾರಿ ಭೂ ದಾಖಲೆಗಳನ್ನು ಅಕ್ರಮವಾಗಿ ಬದಲಾಯಿಸಿರುವ ಬಗ್ಗೆ

**ಶ್ರೀ ಬಿ.ಎಂ. ಫಾರೂಖ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೩೦೫೦ (೨೫೦೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೩-೧೪ನೇ ಸಾಲಿನಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ ವಿವಿಧ ಗ್ರಾಮಗಳ ಸರ್ಕಾರಿ ಭೂ ದಾಖಲೆಗಳನ್ನು ಅಕ್ರಮವಾಗಿ ಆಗಿನ ಉಪ ತಹಸೀಲ್ದಾರ್‌ರವರು ಬದಲಾಯಿಸಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ ಯಾವ ಯಾವ ಗ್ರಾಮಗಳ ಸರ್ಕಾರಿ ಭೂ ದಾಖಲೆಗಳನ್ನು ಅಕ್ರಮವಾಗಿ ಬದಲಾಯಿಸಲಾಗಿದೆ ; (ಸರ್ವೆ ನಂಬರ್ ವಾರು ವಿವರ ಒದಗಿಸುವುದು)

(ಇ) ಸದರಿ ಸರ್ಕಾರಿ ಭೂ ದಾಖಲೆಗಳನ್ನು ಅಕ್ರಮವಾಗಿ ವರ್ಗಾಯಿಸುವುದಕ್ಕೆ ಚಿಂತಾಮಣಿ ನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿರುವುದು ನಿಜವೇ ; (ದೂರಿನ ಪ್ರತಿ ಒದಗಿಸುವುದು)

(ಈ) ಸದರಿ ಸರ್ಕಾರಿ ಭೂ ದಾಖಲೆಗಳನ್ನು ಬದಲಾಯಿಸಲು ಆಗಿನ ಉಪ ತಹಸೀಲ್ದಾರವರೇ ಕಾರಣಕರ್ತರೆಂದು ಇಲಾಖಾ ವಿಚಾರಣೆಯಲ್ಲಿ ಸಾಬೀತಾದರೂ ಅವರನ್ನು ಸೇವೆಯಿಂದ ವಜಾ ಮಾಡದೇ ಕೇವಲ ಎರಡು ವಾರ್ಷಿಕ ವೇತನ ಬಡ್ತಿಗಳನ್ನು

ಕಡಿತಗೊಳಿಸಿ ಅವರ ಸೇವೆಯನ್ನು ಹೊಸಕೋಟೆ ತಾಲ್ಲೂಕಿನ ಅನುಗೊಂಡನ ಹಳ್ಳಿಯ ಉಪ ತಹಸೀಲ್ದಾರಾಗಿ ಮುಂದುವರಿಸಲು ಕಾರಣವೇನು ; (ವಿವರ ಒದಗಿಸುವುದು)

(ಉ) ಸದರಿ ಸರ್ಕಾರಿ ಭೂ ದಾಖಲೆಗಳನ್ನು ಅಕ್ರಮವಾಗಿ ವರ್ಗಾಯಿಸುವುದಕ್ಕೆ ಕಾರಣರಾದ ತಪ್ಪಿತಸ್ಥ ಉಪ ತಹಸೀಲ್ದಾರರನ್ನು ಯಾವ ಕಾಲಮಿತಿಯೊಳಗೆ ಸೇವೆಯಿಂದ ವಜಾ ಮಾಡಲಾಗುವುದು ?

## ವಸತಿ ಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಗಳ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೫೧ (೨೪೮೭) ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯಲ್ಲಿ ವಿವಿಧ ತಾಲ್ಲೂಕುಗಳಲ್ಲಿ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು/ಪ್ರತಿ ಶಾಲೆಗಳ ಮಾಹಿತಿ ನೀಡುವುದು)

(ಆ) ಕಾರ್ಯ ನಿರ್ವಹಿಸುತ್ತಿರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳ ಪೈಕಿ ಖಾಯಂ ನೌಕರರ ಸಂಖ್ಯೆ ಹಾಗೂ ಗುತ್ತಿಗೆ ಆಧಾರಿತ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಪ್ರಸ್ತುತ ಈಗ ಅವಶ್ಯಕತೆಯಿರುವ ಎಲ್ಲಾ ಸಿಬ್ಬಂದಿಗಳ ವಿವರ ನೀಡುವುದು ; (ಪ್ರತಿ ವಸತಿ ಶಾಲೆಗಳ ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ವಿವಿಧ ವಸತಿ ಶಾಲೆಗಳ ಪೈಕಿ ಎಷ್ಟು ಶಾಲೆಗಳು ಸ್ವಂತ ಕಟ್ಟಡದಲ್ಲಿ ಹಾಗೂ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಕಾರವಾರ ಜಿಲ್ಲೆಯ ಪೋಡಿ ಪ್ರಕರಣ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೫೨ (೨೪೮೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಕಂದಾಯ ಇಲಾಖೆಯಲ್ಲಿ ಬಾಕಿ ಇರುವ ಪೋಡಿ ಪ್ರಕರಣಗಳ ಸಂಖ್ಯೆ ಎಷ್ಟು ; (ವಿವರಗಳನ್ನು ನೀಡುವುದು)

(ಆ) ಕಳೆದ ೫ ವರ್ಷಗಳಿಂದ ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಕಂದಾಯ ಇಲಾಖೆಯಲ್ಲಿ ಜಮೀನು ಪೋಡಿಗಾಗಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಈ ಸಂಬಂಧ ಬಾಕಿ ಉಳಿದಿರುವ ಪ್ರಕರಣಗಳು ಎಷ್ಟು; ಪೋಡಿ ಪ್ರಕರಣಗಳು ಬಾಕಿ ಇರಲು ಕಾರಣವೇನು ? (ವಿವರಗಳನ್ನು ತಾಲ್ಲೂಕುವಾರು/ಜಿಲ್ಲಾವಾರು ನೀಡುವುದು)

## ನದಿದಂಡೆ ವ್ಯಾಪ್ತಿಯಲ್ಲಿ ಅತಿಕ್ರಮಿಸಿಕೊಂಡ ಜಮೀನು ತೆರವುಗೊಳಿಸಲು ಕ್ರಮದ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೫೩ (೨೪೮೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯಲ್ಲಿ ಖಾಸಗಿ ವ್ಯಕ್ತಿಗಳು ನದಿದಂಡೆ ವ್ಯಾಪ್ತಿಯನ್ನು ಆಕ್ರಮಿಸಿಕೊಂಡಿದ್ದಲ್ಲಿ, ಯಾವ ಸಕ್ಷಮ ಪ್ರಾಧಿಕಾರವು ಆಕ್ರಮಿತ ಪ್ರದೇಶವನ್ನು ತೆರವುಗೊಳಿಸುವ ಅಧಿಕಾರ ಹೊಂದಿದೆ ; (ವಿವರ ನೀಡುವುದು)

(ಆ) ಸದರಿ ನದಿ ದಂಡೆ ವ್ಯಾಪ್ತಿಯಲ್ಲಿ ಒತ್ತುವರಿ ಮಾಡಿಕೊಂಡು ಸರ್ಕಾರಕ್ಕೆ ಮಾಹಿತಿ ನೀಡಿ ಅಕ್ರಮ–ಸಕ್ರಮದಡಿ ಮಂಜೂರಾತಿ ಮಾಡಿಕೊಂಡಿರುವ ಪ್ರಕರಣಗಳಿವೆಯೇ ; ಇದ್ದಲ್ಲಿ, ಯಾವ ನಿಯಮಾವಳಿಯಡಿಯಲ್ಲಿ ತೆರವುಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದು ? (ಸಂಪೂರ್ಣ ವಿವರದೊಂದಿಗೆ ಮಾಹಿತಿ ಒದಗಿಸುವುದು)

## ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಸಹಾಯ ಧನ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೫೪ (೨೪೮೫) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಹಿಂದುಳಿದ ವರ್ಗದ ವಿದ್ಯಾರ್ಥಿಗಳ ಭವಿಷ್ಯಕ್ಕೋಸ್ಕರ ನೀಡಿರುವ ಸಹಾಯ ಧನ ಎಷ್ಟು ; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಇದರಿಂದ ಎಷ್ಟು ಜನ ವಿದ್ಯಾರ್ಥಿಗಳಿಗೆ ಸಹಾಯವಾಗಿದೆ ; (ಹಿಂದುಳಿದ ವರ್ಗವಾರು ತಾಲ್ಲೂಕಾವಾರು ಮಾಹಿತಿ ನೀಡುವುದು)

## ಕೆರೆಗೆ ತಡೆಗೋಡೆ ಇಲ್ಲದಿರುವುದರಿಂದ ಅಪಾಯದ ಮಟ್ಟ ಮೀರಿರುವ ಕುರಿತು

**ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು) :–**

೩೦೫೫ (೨೪೮೩) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಉತ್ತರ ತಾಲ್ಲೂಕು, ಯಲಹಂಕ ಹೋಬಳಿಗೆ ಸೇರಿದ ಮಾರಸಂದ್ರ ಗ್ರಾಮದಿಂದ ಹೊನ್ನಾದೇವಿಪುರ ಗೇಟ್‌ವರೆಗೆ ರಸ್ತೆ ಕಾಮಗಾರಿಯ ರೂಪುರೇಷೆಗಳೇನು ; ಈ ಕಾಮಗಾರಿಯನ್ನು ಕೈಗೊಂಡಿದ್ದು ಯಾವಾಗ ; ಇದು ಪೂರ್ಣಗೊಂಡಿದೆಯೇ ; (ವಿವರ ನೀಡುವುದು)

(ಆ) ಈ ಕಾಮಗಾರಿ ಸೇರಿದಂತೆ ದೊಡ್ಡ ತುಮಕೂರು ಗ್ರಾಮದಿಂದ ಗೌಡಹಳ್ಳಿ ಗ್ರಾಮದವರೆಗೆ ಕೆರೆ ಏರಿ ಮೇಲೆ ರಸ್ತೆ ಕಾಮಗಾರಿಯನ್ನು ಪೂರ್ಣಗೊಳಿಸದೆ ಸ್ಥಗಿತಗೊಂಡಿರುವುದಲ್ಲದೆ ಈ ಕೆರೆಗೆ ತಡೆಗೋಡೆ ಇಲ್ಲದೆ ಇರುವುದರಿಂದ ಅಪಾಯದ ಮಟ್ಟ ಮೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸೂಕ್ತ ಕ್ರಮ ಕೈಗೊಳ್ಳುವುದು ಯಾವಾಗ ;

(ಇ) ಈ ರಸ್ತೆಯು ಸಂಪೂರ್ಣ ಮಣ್ಣು ರಸ್ತೆಯಾಗಿದ್ದು, ಮಳೆಗಾಲದಲ್ಲಿ ಸಾರ್ವಜನಿಕರಿಗೆ/ಶಾಲಾ ವಾಹನಗಳಿಗೆ/ದನಕರುಗಳಿಗೆ ತುಂಬಾ ತೊಂದರೆಯಾಗುತ್ತಿರುವುದರಿಂದ ಸರ್ಕಾರವು ಕೂಡಲೇ ಆದ್ಯತೆ ಮೇಲೆ ಕೆಲಸ ಕೈಗೊಳ್ಳುವುದೇ ? (ಸಂಪೂರ್ಣ ವಿವರ ನೀಡುವುದು)

## ಹೊಸಕೋಟೆ ತಾಲ್ಲೂಕಿನ ತಹಶೀಲ್ದಾರ್‌ರವರು ಅಧಿಕಾರ ದುರುಪಯೋಗ ಪಡಿಸಿಕೊಂಡಿರುವ ಬಗ್ಗೆ

**ಶ್ರೀ ನಸೀರ್ ಅಹ್ಮದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೫೬ (೨೪೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊಸಕೋಟೆ ತಾಲ್ಲೂಕಿನ ತಹಶೀಲ್ದಾರ್‌ರವರು ಅಧಿಕಾರ ದುರುಪಯೋಗ ಪಡಿಸಿಕೊಂಡು ಸರ್ಕಾರಿ ಗೋಮಾಳ ಜಮೀನು

ಹಾಗೂ ಹಿಡುವಳೀ ಜಮೀನುಗಳನ್ನು ನಿಯಮ ಬಾಹಿರವಾಗಿ ಖಾತೆ ವರ್ಗಾಯಿಸುತ್ತಿರುವ ಕುರಿತು ದೂರು ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹೌದಾದಲ್ಲಿ, ಯಾವ ಯಾವ ಗೋಮಾಳ ಹಾಗೂ ಹಿಡುವಳಿ ಜಮೀನುಗಳನ್ನು ನಿಯಮ ಬಾಹಿರವಾಗಿ ಖಾತೆ ವರ್ಗಾಯಿಸಿರುವ ಕುರಿತು ದೂರು ದಾಖಲಾಗಿವೆ ; (ಪ್ರಕರಣವಾರು ಮಾಹಿತಿ ಒದಗಿಸುವುದು)

(ಇ) ಸದರಿ ತಹಶಿಲ್ದಾರ್‌ರವರ ಅಧಿಕಾರ ದುರುಪಯೋಗಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರು ದಿನಾಂಕ:೨೭.೧೦.೨೦೨೦ ರಂದು ಸರ್ಕಾರಕ್ಕೆ ವರದಿ ಮಾಡಿದರೂ ಈವರೆವಿಗೂ ಸರ್ಕಾರ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣವೇನು ;

(ಈ) ಯಾವ ಕಾಲಮಿತಿಯೊಳಗೆ ಸದರಿ ತಹಶೀಲ್ದಾರ್ ರವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ?

## ರಾಜ್ಯದಲ್ಲಿ ಪ್ರತಿ ಎಕರೆ ಭೂಮಿಗೆ ದರ ನಿಗದಿಪಡಿಸಿರುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೩೦೫೭ (೨೫೪೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಕಂದಾಯ ಭೂಮಿ ಹಾಗೂ ಆರಣ್ಯ ಭೂಮಿ ಎಷ್ಟು ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಕೇಂದ್ರ ಸರ್ಕಾರಕ್ಕೆ ಸೇರಿದ ಭೂಮಿ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಜಮೀನು ಖರೀದಿ ಮಾಡಲು ಹಾಗೂ ಜಮೀನು ಮಾರಾಟ ಮಾಡಲು ಸರ್ಕಾರ ಪ್ರತಿ ಎಕರೆ ಭೂಮಿ/ಜಮೀನಿಗೆ ನಿಗದಿಪಡಿಸಿದ ದರ ಎಷ್ಟು ಹಾಗೂ ನೋಂದಣಿ ಶುಲ್ಕ ಎಷ್ಟು? (ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಟೋಲ್ ಪ್ಲಾಜಾಗಳ ಅವಧಿ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :-**

೩೦೫೮ (೨೫೪೨) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಟೋಲ್ ಪ್ಲಾಜಾಗಳು ಎಷ್ಟು ; ಅವು ಯಾವುವು ; (ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿಗಳ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಕಂಪನಿಗಳು ಎಷ್ಟು ಕಿಲೋ ಮೀಟರ್‌ವರೆಗೆ ರಸ್ತೆ ನಿರ್ಮಿಸಿದ ಹಾಗೂ ಅವುಗಳ ಖರ್ಚು ಮಾಡಿದ (ರಸ್ತೆ ನಿರ್ಮಿಸಲು) ಮೊತ್ತವೆಷ್ಟು ; (ಈ ಕಂಪನಿಗಳ ಮುಕ್ತಾಯವಾಗುವ ವರ್ಷ ಹಾಗೂ ಕಾರ್ಯಾರಂಭದ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ಕಂಪನಿಗಳು ಪ್ರತಿ ತಿಂಗಳು ಸಂಗ್ರಹಿಸುತ್ತಿರುವ ಒಟ್ಟು ಟೋಲ್ ಶುಲ್ಕದ ಮೊತ್ತವೆಷ್ಟು ಹಾಗೂ ಸರ್ಕಾರಕ್ಕೆ ಪ್ರತಿ ತಿಂಗಳು ಸಂಗ್ರಹವಾಗುತ್ತಿರುವ ಆದಾಯ ತೆರಿಗೆ ಎಷ್ಟು ;

(ಈ) ಯಾವ ಯಾವ ಗಣ್ಯವ್ಯಕ್ತಿಗಳಿಗೆ ಹಾಗೂ ಯಾವ ಯಾವ ವಾಹನಗಳಿಗೆ ಟೋಲ್ ಪ್ಲಾಜಾಗಳಲ್ಲಿ ಟೋಲ್ ಶುಲ್ಕದಿಂದ ವಿನಾಯಿತಿ ನೀಡಲಾಗಿದೆ ? (ಪೂರ್ಣ ಮಾಹಿತಿ ನೀಡುವುದು)

## ಜಿಲ್ಲಾಧಿಕಾರಿಗಳ ಹಂತದಲ್ಲಿ ಸುಳ್ಳು ದಾಖಲೆ ನೀಡಿ ೩೭೧ಜೆ ಅರ್ಹತಾ ಪ್ರಮಾಣ ಪತ್ರಗಳನ್ನು ರದ್ದುಪಡಿಸುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೩೦೫೯ (೨೪೮೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲಾಧಿಕಾರಿಗಳ ಹಂತದಲ್ಲಿ ಸುಳ್ಳು ದಾಖಲೆ ನೀಡಿ ಪಡೆದಂತಹ ೩೭೧ಜೆ ಅರ್ಹತಾ ಪ್ರಮಾಣ ಪತ್ರಗಳನ್ನು ರದ್ದುಪಡಿಸಲು ಎಷ್ಟು ಅರ್ಜಿಗಳನ್ನು ಸಲ್ಲಿಸಲಾಗಿದೆ ; ಜಿಲ್ಲಾಧಿಕಾರಿಗಳ ನಿಯಮದಂತೆ ಎಷ್ಟು ದಿನಗಳಲ್ಲಿ ಅರ್ಜಿಗಳ ವಿಲೇವಾರಿ ಮಾಡಬೇಕು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಜಿಲ್ಲಾಧಿಕಾರಿಗಳು ವಿಲೇವಾರಿ ಮಾಡದಿರುವ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಜಿಲ್ಲಾಧಿಕಾರಿಗಳು ಸುಳ್ಳು ದಾಖಲೆ ನೀಡಿ ಪಡೆದಂತಹ ೩೭೧ಜೆ ಅರ್ಹತಾ ಪ್ರಮಾಣ ಪತ್ರಗಳನ್ನು ರದ್ದುಪಡಿಸಲು ವಿಳಂಬ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ನಿಗದಿತ ಅವಧಿಯಲ್ಲಿ ಅರ್ಜಿಗಳ ವಿಲೇವಾರಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಬೆಟ್ಟದಪುರದ ಸಿಡಿಲು ಮಲ್ಲಿಕಾರ್ಜುನ ದೇವಾಲಯದ ರಾಜಗೋಪುರದ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೬೦ (೨೪೭೭) ಮಾನ್ಯ ಮುಜರಾಯಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆ, ಪಿರಿಯಾಪಟ್ಟಣ ತಾಲ್ಲೂಕು, ಬೆಟ್ಟದಪುರದ ಸಿಡಿಲು ಮಲ್ಲಿಕಾರ್ಜುನ ದೇವಾಲಯದ ರಾಜಗೋಪುರ ಜೀರ್ಣಾವಸ್ಥೆಗೆ ತಲುಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರಾಜಗೋಪುರ ಮತ್ತು ದೇವಾಲಯದ ಜೀರ್ಣೋದ್ಧಾರ ಮತ್ತು ನಿರ್ವಹಣೆಗೆ ಸರ್ಕಾರ ಕೂಡಲೇ ಸೂಕ್ತ ಕ್ರಮ ತೆಗೆದುಕೊಳ್ಳುವುದೇ ?

## ಹನೂರು ಭೈರನತ್ತ ರಸ್ತೆಯ ದುರಸ್ಥಿ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೬೧ (೨೪೭೮) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹನೂರು–ಚೆಂಗವಾಡಿ–ಭೈರನತ್ತ ರಸ್ತೆಯು ತೀರಾ ಹದಗೆಟ್ಟಿದ್ದು, ವಾಹನ ಸಂಚಾರಕ್ಕೆ ಅನಾನುಕೂಲವಾಗಿ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇತ್ತೀಚೆಗೆ ನಡೆದ ಜಿಲ್ಲಾಧಿಕಾರಿ ನಡೆ ಗ್ರಾಮದ ಕಡೆ ವಾಸ್ತವ್ಯ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಈ ಬಗ್ಗೆ ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹನೂರು–ಚೆಂಗವಾಡಿ–ಭೈರನತ್ತ ಹಾಗೂ ಭೈರನತ್ತ–ಗೂಳ್ಯ ರಸ್ತೆಯ ಅಭಿವೃದ್ಧಿಗೆ ಸರ್ಕಾರ ಕೂಡಲೇ ಸೂಕ್ತ ಕ್ರಮ ತೆಗೆದುಕೊಳ್ಳುವುದೇ ?

## ತಿ. ನರಸೀಪುರ ತಾಲ್ಲೂಕಿನಲ್ಲಿ ೧೮೦ ಹಳ್ಳಿಗಳಿಗೆ ಒಬ್ಬರೇ ಭೂಮಾಪಕರು ಇರುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೬೨ (೨೪೭೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತಿ.ನರಸೀಪುರ ತಾಲ್ಲೂಕಿನಲ್ಲಿ ೧೮೦ ಹಳ್ಳಿಗಳಿದ್ದು, ಕೇವಲ ಒಬ್ಬರೇ ಭೂಮಾಪಕರು ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ತಾಲ್ಲೂಕಿನಲ್ಲಿ ಖಾಲಿ ಇರುವ ಭೂಮಾಪಕರ ಹುದ್ದೆಯನ್ನು ಭರ್ತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುವುದೇ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0–231/500 ಪ್ರತಿಗಳು/23–03–2021